ಸಂಪುಟ : 10 ಸಂಚಿಕೆ: 36 ಪುಟ : 4+2 ಬೆಲೆ: 3.00 ಶುಕ್ರವಾರ ಮಾರ್ಚ 7 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 36 Pages : 4+2 Price : 3.00 Friday March 7 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಶಿರಹಟ್ಟಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಮಾರ್ಚ್ 8ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

ಸದರಿ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕುಡಿಯುವ ನೀರಿನ ಸ್ಥಾವರಗಳು, ಕೈಗಾರಿಕಾ, ಸೋಲಾರ್ ಐ.ಪಿ.ಪಿ, ಮೆ: ಬಿ.ಪಿ.ಸಿ.ಎಲ್ 1 & 2ರ ಗಾಳಿಯಂತ್ರ ಘಟಕಕ್ಕೆ ಮತ್ತು ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ತಿಳಿಸಿದೆ.

## ಸಿಎಂ ಸಿದ್ದರಾಮಯ್ಯರಿಗಾಗಿ ವಿಶೇಷ ಪೂಜೆ

■ವಿಜಯಸಾಕ್ಷಿ ಸುದ್ದಿ, ಗದಗ



ಸಮಸ್ತ ಶೋಷಿತ ವರ್ಗಗಳ ಕಣ್ಮಣಿ, ಧೀಮಂತ ನಾಯಕ, ರಾಜ್ಯಕ್ಕೆ ಗ್ಯಾರಂಟಿಗಳನ್ನು ನೀಡಿದ ಸರದಾರ ಸಿದ್ದರಾಮಯ್ಯ ಅವರು ಮಾರ್ಚ್ 7ರಂದು ತಮ್ಮ ದಾಖಲೆಯ 16ನೇ ಬಜೆಟ್ ಮಂಡಿಸುತ್ತಿದ್ದು, ಬಜೆಟ್ ಅಂಶಗಳು ಸರ್ವರಿಗೂ ಅನುಕೂಲಕರವಾಗಿರಲಿ ಹಾಗೂ ಮುಖ್ಯಮಂತ್ರಿಗಳು ಐದು ವರ್ಷಗಳ ಕಾಲ ಯಶಸ್ವಿಯಾಗಿ ಅಧಿಕಾರ ಮುಂದುವರೆಸಲಿ ಎಂದು ನಗರದ ಬಯಲು ಆಂಜನೇಯ ದೇವಸ್ಥಾನದಲ್ಲಿ ವಿಶೇಷ ಪೂಜೆ ಹಾಗೂ ಶ್ರೀ ರಾಕೇಶ ಸಿದ್ದರಾಮಯ್ಯ ಐಟಿಐ ಕಾಲೇಜಿನ ಅವರಣದಲ್ಲಿ ಸಂಭ್ರಮಾಚರಣೆ ಆಚರಿಸಲಾಗುವದು.

ಮಾ. 7ರಂದು ಜಿಲ್ಲೆಯ ಸಮಾಜ ಬಾಂಧವರು, ಸಿದ್ದರಾಮಯ್ಯನವರ ಅಭಿಮಾನಿಗಳು ಹಾಗೂ ಹಿತೈಷಿಗಳು ತಮ್ಮ ತಮ್ಮ ಗ್ರಾಮಗಳಲ್ಲಿರುವ ದೇವಸ್ಥಾನಗಳಲ್ಲಿ ವಿಶೇಷ ಪೂಜೆ ನೆರವೇರಿಸಿ ಸಿದ್ದರಾಮಯ್ಯರವರಿಗೆ ಶುಭ ಹಾರೈಸಲು ಕರ್ನಾಟಕ ಪ್ರದೇಶ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕೀರಪ್ಪ ಹೆಬಸೂರ ಹಾಗೂ ಸಮಾಜದ ಯುವ ಮುಖಂಡರಾದ ರಾಮಕೃಷ್ಣ ರೊಳ್ಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಸಿ ಕಚೇರಿ ಎದುರು ಪ್ರತ್ಯಕ್ಷವಾದ ಹಾವು- ಭಯಭೀತರಾದ ಜನ!

■ವಿಜಯಸಾಕ್ಷಿ ಸುದ್ದಿ, ಬಾಗಲಕೋಟೆ

ಬಾಗಲಕೋಟೆ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಎದುರೇ ಹಾವು ಕಾಣಿಸಿಕೊಂಡು ಕೆಲಹೊತ್ತು ಅಲ್ಲಿಯ ನೌಕರರನ್ನ ಭಯಭೀತಗೊಳಿಸಿದ್ದ ಘಟನೆ ಜರುಗಿದೆ.

ನೌಕರರು ಎಂದಿನಂತೆ ತಮ್ಮ ಕೆಲಸಕ್ಕೆ ಹಾಜರಾಗುವ ವೇಳೆ ಹಾವು ಕಚೇರಿ ಎದುರು ಹರಿದು ಮುಂದೆ ಹೊರಟಿತ್ತು. ನಂತರ ಜಿಲ್ಲಾಡಳಿತ ಸಿಬ್ಬಂದಿ ಸ್ನೇಕ್ ಕ್ಯಾಚರ್ ರಾಜುಗೆ ವಿಷಯ ತಿಳಿಸಿದರು. ಸ್ಥಳಕ್ಕೆ ಆಗಮಿಸಿದ ರಾಜು ಹಾವನ್ನು ರಕ್ಷಣೆ ಮಾಡಿದರು.

### ಬಡ್ಡಿ ದಂಧೆಕೋರರಿಗೆ ಕಠಿಣ ಶಿಕ್ಷೆ ವಿಧಿಸಿ ಗಡಿಪಾರು ಮಾಡುವಂತೆ ಆಗ್ರಹಿಸಿ ಪ್ರತಿಭಟನೆ

# ರಕ್ತ ಪಿಪಾಸುಗಳ ಸದ್ದಡಗಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಬಡ್ಡಿ ದಂಧೆಕೋರರ ಹಾವಳಿಯಿಂದ ಗದಗ-ಬೆಟಗೇರಿ ಅವಳಿ ನಗರದ ಜನತೆ ತತ್ತರಿಸಿ ಹೋಗಿದ್ದು, ಅಮಾನುಷವಾಗಿ ಜನರಿಂದ ಬಡ್ಡಿ ವಸೂಲಿ ಮಾಡುತ್ತಿದ್ದಾರೆ. ಇಂತಹ ಬಡ್ಡಿ ದಂಧೆಕೋರರು ಹಾಗೂ ಮೈಕ್ರೋ ಫೈನಾನ್ಸ್‌ಗಳ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು. ಹೀಗೆ ಕಿರುಕುಳ ನೀಡುವವರನ್ನು ಗದಗ ಜಿಲ್ಲೆಯಿಂದ ಗಡಿಪಾರು ಮಾಡಬೇಕೆಂದು ಆಗ್ರಹಿಸಿ ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ನೊಂದ ಮಹಿಳೆಯರು ಅಂಬಿಕಾ ಎಲ್.ಕಬಾಡಿ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ ದೂರು ಸಲ್ಲಿಸಿದರು.

ಈ ಸಂದರ್ಭದಲ್ಲಿ ಅಂಬಿಕಾ ಕಬಾಡಿ ಮಾತನಾಡಿ, ಗದಗ-ಬೆಟಗೇರಿ ನಗರದಲ್ಲಿ ಈ ಹಿಂದೆ ಪೊಲೀಸ್ ಇಲಾಖೆಯಿಂದ 12ಕ್ಕೂ ಹೆಚ್ಚು ಬಡ್ಡಿ ದಂಧೆಕೋರರ ಮನೆಗಳ ಮೇಲೆ ದಾಳಿ ನಡೆಸಿ, ಅಪಾರ ಪ್ರಮಾಣದ ಹಣ, ಆಸ್ತಿ-ಪಾಸ್ತಿಗಳು ಹಾಗೂ ಖಾಲಿ ಚೆಕ್‌ಗಳನ್ನು ವಶಪಡಿಸಿಕೊಂಡಿದ್ದರೂ ಈವರೆಗೂ ಬಡ್ಡಿ ದಂಧೆಕೊರರು ತಮ್ಮ ಬಡ್ಡಿ ವ್ಯವಹಾರವನ್ನು ನಿಲ್ಲಿಸಿಲ್ಲ. ಬಡಜನರ ರಕ್ತ ಹೀರುವ ಇಂತಹ ರಕ್ತ ಪಿಪಾಸುಗಳ ಅಕ್ರಮಕ್ಕೆ ಕಡಿವಾಣ ಬೀಳದೆ ಇರುವುದು ನಮ್ಮ ಜಿಲ್ಲೆಯ ದುರ್ದೈವ. ಇವರ ವಿರುದ್ಧ ಪೊಲೀಸರಿಗೆ ತಿಳಿಸುತ್ತೇನೆಂದರೆ, ಅವರ ಮೇಲೆ ದಬ್ಬಾಳಿಕೆ ನಡೆಸಿ, ಜೀವ ಬೆದರಿಕೆ ಹಾಕುತ್ತಿದ್ದಾರೆ.




ಹೀಗೆ ನೊಂದ ಕುಟುಂಬಗಳು ಇಂದು ಬೀದಿಗಿಳಿದು ಹೋರಾಟ ನಡೆಸುತ್ತಿದ್ದೇವೆ. ಹಣವನ್ನು ಮರಳಿ ಕೊಟ್ಟ ನಂತರ ನಿಮ್ಮ ಆಸ್ತಿಯನ್ನು ಮರಳಿಸುತ್ತೇವೆಂದು ಸಬೂಬು ಹೇಳಿ, ಹಣ ಮರಳಿಸಿದರೂ ಆಸ್ತಿಯನ್ನು ಬಿಟ್ಟುಕೊಡದೆ ಲಪಟಾಯಿಸುತಿದ್ದಾರೆ. ಇದರಿಂದ ಸಾಕಷ್ಟು ಜನ ನೊಂದಿದ್ದಾರಲ್ಲದೆ, ಕೆಲವರು ಊರು ಬಿಟ್ಟಿದ್ದಾರೆ. ಇನ್ನು ಕೆಲವು ಜನ ತಮ್ಮ ಮರ್ಯಾದೆಗೆ ಅಂಜಿ ಜೀವವನ್ನೇ ಬಿಡುತಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಸಾಮಾಜಿಕ ಹೋರಾಟಗಾರದ ದಾವಲಸಾಬ ಮುಳಗುಂದ, ಅನೀಫ್ ಮುಳಗುಂದ, ಕರವೇ ಜಿಲ್ಲಾಧ್ಯಕ್ಷ ಮಂಜುನಾಥ ಪರ್ವತಗೌಡ್ರ, ಮಮತಾಜಬಾಯಿ, ಅನಿತಾ, ಜ್ಯೋತಿ, ತುಳಸಿ ಕಬಾಡಿ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ನೊಂದ ಕುಟುಂಬಗಳ ಸದಸ್ಯರು ಇದ್ದರು.

ಬ್ಲ್ಯಾಕ್‌ಮೇಲ್ ಮೂಲಕ ಜನರ ಜೀವ ಹಿಂಡುತ್ತಿರುವ ಇವರುಗಳನ್ನು ಕೂಡಲೇ ಬಂಧಿಸಿ ಕಾನೂನು ರೀತ್ಯಾ ಕ್ರಮ ಕೈಗೊಂಡು ಅಮಾಯಕರ ಆಸ್ತಿ-ಪಾಸ್ತಿಗಳನ್ನು ಮರಳಿ ಕೊಡಿಸುವಂತೆ ಕ್ರಮ ವಹಿಸಬೇಕು.

ಮುಂದಿನ ಏಳು ದಿನಗಳೊಳಗಾಗಿ ಈ ಕುರಿತು ಕಟ್ಟುನಿಟ್ಟಿನ ಕ್ರಮ ವಹಿಸದಿದ್ದಲ್ಲಿ ಇವರಿಂದ ನೊಂದ ಕುಟುಂಬಗಳಿಂದ ಗದಗ ಜಿಲ್ಲೆಯಾದ್ಯಾಂತ ಸಾವಿರಾರು ಸಂಖ್ಯೆಯಲ್ಲಿ ಕುಟುಂಬಸ್ಥರು, ಆ ಕುಟುಂಬಗಳ ಮಹಿಳೆಯರು ಮತ್ತು ವಿವಿಧ ಸಂಘನೆಗಳಿಂದ ಗದಗ ಜಿಲ್ಲೆ ಬಂದ್‌ಗೆ ಮುಂದಾಗುತ್ತೇವೆ ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು.




### ಅಕ್ರಮ ಆಸ್ತಿ ಗಳಿಕೆ ಆರೋಪ: ಭ್ರಷ್ಟರ ಮನೆಯಲ್ಲಿ ಕಂತೆ ಕಂತೆ ಹಣ, ವಜ್ರ-ವೈಢೂರ್ಯ ಪತ್ತೆ

# ರಾಜ್ಯದ 8 ಕಡೆ ಲೋಕಾಯುಕ್ತ ದಾಳಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕದ 8 ಕಡೆ ಗುರುವಾರ ಮುಂಜಾನೆ ಲೋಕಾಯುಕ್ತ ದಾಳಿ ನಡೆದಿದ್ದು, ಭ್ರಷ್ಟರ ಮನೆಯಲ್ಲಿ ಕಂತೆ-ಕಂತೆ ಹಣ, ವಜ್ರ-ವೈಡೂರ್ಯ ಪತ್ತೆಯಾಗಿದೆ. ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಕೆ ಮಾಡಿದ ಆರೋಪದಡಿ ಗರುವಾರ ಬೆಂಗಳೂರು, ತುಮಕೂರು, ಕೊಲಾರ ಸೇರಿದಂತೆ 7 ಜಿಲ್ಲೆಗಳಲ್ಲಿ ಒಟ್ಟು 8 ಅಧಿಕಾರಿಗಳಿಗೆ ಶಾಕ್ ನೀಡಿದ್ದು, ಅಧಿಕಾರಿಗಳ ಕಚೇರಿ, ಮನೆಗಳ ಮೇಲೆ ದಾಳಿ ಮಾಡಿ ಅಪಾರ ಅಕ್ರಮ ಸಂಪತ್ತು ಪತ್ತೆ ಮಾಡಿದ್ದಾರೆ.

ಬೆಂಗಳೂರಿನಲ್ಲಿ ವಾಸವಿರುವ ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್‌ನ ಚೀಫ್ ಇಂಜಿನಿಯರ್ ನಂಜುಡಪ್ಪ ಅವರ ಮನೆಯ ಮೇಲೆ ನಡೆಸಿದ ದಾಳಿಯಲ್ಲಿ 60 ಲಕ್ಷ ಮೌಲ್ಯದ ವಸ್ತಗಳು ಪತ್ತೆಯಾಗಿದ್ದು, ಇದರಲ್ಲಿ 51 ಲಕ್ಷ ಮೌಲ್ಯದ 841 ಗ್ರಾಂ ಚಿನ್ನ, 4.66 ಲಕ್ಷ ಮೌಲ್ಯದ 5936 ಗ್ರಾಂ ಬೆಳ್ಳಿ, 3.91 ಲಕ್ಷ ನಗದು ಹಾಗೂ 60 ಸಾವಿರ ವಿದೇಶಿ ಕರೆನ್ಸಿಗಳು ಸೇರಿವೆ. ಭವ್ಯವಾದ



ಮನೆ ಹಾಗೂ ಆ ಮನೆಯಲ್ಲಿದ್ದ 39 ಲಕ್ಷ ಮೌಲ್ಯದ ನಾಲ್ಕು ಕಾರುಗಳು ಸಹ ಪತ್ತೆಯಾಗಿವೆ.

ಬಿಬಿಎಂಪಿ ಕಾರ್ಯಪಾಲಕ ಅಭಿಯಂತರ ಹೆಚ್.ಬಿ. ಕಲ್ಲೇಶಪ್ಪ ಅವರಿಗೆ ಸೇರಿದ ಒಟ್ಟು 6 ಸ್ಥಳಗಳಲ್ಲಿ ಲೋಕಾಯುಕ್ತ ದಾಳಿ ನಡೆಸಿ ಪರಿಶೀಲನೆ ಮಾಡಿದ್ದು, ಒಟ್ಟು 6,50,52,663 ರೂ. ಮೌಲ್ಯದ ಚರ ಮತ್ತು ಸ್ಥಿರ ಆಸ್ತಿ ಪತ್ತೆಯಾಗಿದೆ.

ದಾವಣಗೆರೆಯಲ್ಲಿ ಆಹಾರ ಇಲಾಖೆಯ ಅಧಿಕಾರಿ ಡಾ. ನಾಗರಾಜ್ ಮನೆಯ ಮೇಲೂ ಲೋಕಾಯುಕ್ತ ದಾಳಿ ನಡೆಸಿದ್ದು, ಮನೆಯಲ್ಲಿ ಲಕ್ಷಾಂತರ ಮೌಲ್ಯದ ವಾಚ್, ಚಿನ್ನ, ಬೆಳ್ಳಿಯ ವಸ್ತುಗಳು ಪತ್ತೆಯಾಗಿವೆ. ನಾಗರಾಜ್‌ಗೆ ಸೇರಿದ ಐದು ಸ್ಥಳಗಳಲ್ಲಿ ಅಕ್ರಮ ಆಸ್ತಿಯ ಕುರಿತು ತನಿಖೆ ನಡೆಸಲಾಗಿದೆ.

ಲೋಕೋಪಯೋಗಿ ಇಲಾಖೆಯ ಚೀಫ್ ಇಂಜಿನಿಯರ್ ಜಗನ್ನಾಥ ಅವರ ಮನೆಯಲ್ಲಿ ಅಪಾರ ಪ್ರಮಾಣದ ವಜ್ರ-ವೈಡೂರ್ಯಗಳು ಪತ್ತೆಯಾಗಿವೆ. ಕಲಬುರಗಿಯ ಓಉಟಿ ಕಾಲೋನಿ ನಿವಾಸದಲ್ಲಿ 2 ಕೆಜಿಗೂ ಅಧಿಕ ಬೆಳ್ಳಿ ಪತ್ತೆಯಾಗಿದೆ. ಮನೆಯ ಲಾಕರ್‌ನಲ್ಲಿ ಡೈಮಂಡ್ ರಿಂಗ್ ಸೇರಿದಂತೆ 30ಕ್ಕೂ ಹೆಚ್ಚು ಬಂಗಾರದ ನಾಣ್ಯಗಳು ಪತ್ತೆಯಾಗಿರುವದಾಗಿ ಮೂಲಗಳು ತಿಳಿಸಿವೆ.

ಇನ್ನುಳಿದಂತೆ ಬಾಗಲಕೋಟೆಯಲ್ಲಿ ಪಂಚಾಯತ್ ರಾಜ್ ಇಲಾಖೆಯ ಅಕೌಂಟಂಟ್ ಮಲ್ಲೇಶ್, ವಿಜಯಪುರದ ಕೆಹೆಚ್‌ಬಿ ಈಆಂ ಶಿವಾನಂದ ಕೆಂಬಾವಿ, ತುಮಕೂರಿನಲ್ಲಿ ವೈದ್ಯ ಜಗದೀಶ್ ಮನೆ ಮೇಲೂ ದಾಳಿ ನಡೆದಿದೆ.

## ಅಹಲ್ಯಬಾಯಿ ಹೊಳ್ಕರ್ ಜ್ಯೋತಿಯಾತ್ರೆ ಸಂಚಾರ




■ವಿಜಯಸಾಕ್ಷಿ ಸುದ್ದಿ, ಗದಗ

17ನೇ ಶತಮಾನದಲ್ಲಿ ಹಿಂದೂ ದೇವಾಲಯಗಳ ಸೃಷ್ಟಿಕರ್ತೆಯಾಗಿ ಗುರುತಿಸಿಕೊಂಡಿರುವ ಲೋಕಮಾತೆ ಅಹಲ್ಯಬಾಯಿ ಹೊಳ್ಕರ್ ಅವರ 300ನೇ ಜಯಂತಿ ನಿಮಿತ್ತ ಮಾ. 24ರಿಂದ ಜ್ಯೋತಿರಥಯಾತ್ರೆ ದೇಶಾದ್ಯಂತ ಸಂಚರಿಸಲಿದೆ ಎಂದು ಸತ್ಯಪ್ಪ ಗುರಿಕಾರ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾ. 24ರಂದು ತಮಿಳುನಾಡಿನ ರಾಮೇಶ್ವರಂನ ದೇವಾಲಯದಿಂದ ಜ್ಯೋತಿ ಯಾತ್ರೆ ಹೊರಡಲಿದ್ದು, ಏಪ್ರಿಲ್ 4ರಂದು ಗದಗ ಜಿಲ್ಲೆಯ ಲಕ್ಕುಂಡಿಗೆ ಆಗಮಿಸಲಿದೆ ಎಂದು ತಿಳಿಸಿದರು. ರಾಮೇಶ್ವರಂ ದೇವಾಲಯದಿಂದ ಹೊರಡುವ ಜ್ಯೋತಿಯಾತ್ರೆಗೆ ಕಾಗಿನೆಲೆ ಕನಕ ಗುರುಪೀಠದ ಸಿದ್ದರಾಮಾನಂದ ಸ್ವಾಮೀಜಿ, ಅಹಲ್ಯಬಾಯಿ ಹೊಳ್ಕರ್ ಮಹಾಶಕ್ತಿ ಪೀಠ ಹರಿದ್ವಾರದ ವಿಜಯಪಾಲ ಸಿಂಗ್ ಚಾಲನೆ ನೀಡಲಿದ್ದಾರೆ ಎಂದು ತಿಳಿಸಿದರು.

ಲೋಕಮಾತೆ ಅಹಲ್ಯಬಾಯಿ ಹೊಳ್ಕರ್ ಮಹಾರಾಷ್ಟ್ರದ ಅಹಲ್ಯ ನಗರದಲ್ಲಿ ಜನಿಸಿದವರು. 17ನೇ ಶತಮಾನದಲ್ಲಿ ಸುಮಾರು 3000ಕ್ಕೂ ಹೆಚ್ಚು ಹಿಂದೂ ದೇವಾಲಯಗಳ ನಿರ್ಮಾಣಕ್ಕೆ ಕಾರಣರಾದರು. ಅದರಲ್ಲಿ ಗೋಕರ್ಣದ ಮಹಾಬಲೇಶ್ವರ ದೇವಸ್ಥಾನದ ಮುಂದಿನ ಛತ್ರವು ಗೋಕರ್ಣಕ್ಕೆ ಭೇಟಿ ನೀಡುವ ಭಕ್ತರಿಗೆ ಉಚಿತ ವಸತಿ ಹಾಗೂ ಪ್ರಸಾದ ನೀಡುವ ಕೆಲಸ ಮಾಡುತ್ತಿದೆ. ಹಿಂದೂ ವಿರೋಧಿಗಳಿಂದ ಧ್ವಂಸಗೊಂಡ 12 ಜ್ಯೋತಿರ್ಲಿಂಗಗಳನ್ನು ಪುನಃ ಸ್ಥಾಪಿಸಿದ ಕೀರ್ತಿ ಅಹಲ್ಯಬಾಯಿ ಹೊಳ್ಕರ್ ಅವರಿಗೆ ಸಲ್ಲುತ್ತದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ವೆಂಕಟೇಶ ಹೂವಣ್ಣವರ, ಬಸವರಾಜ ಗಾಜಿ, ರವಿಚಂದ್ರ ಅಬ್ಬಿಗೇರಿ, ಚನ್ನಮ್ಮ ಹುಳಕಣ್ಣವರ ಉಪಸ್ಥಿತರಿದ್ದರು.

### ಉಚಿತ ಯೋಗ, ನಿಸರ್ಗ ಚಿಕಿತ್ಸಾ ಶಿಬಿರ ಉದ್ಘಾಟಿಸಿದ ವೀರೇಶ ಗುರೂಜಿ ಅಭಿಮತ

# ಯೋಗವು ಜಾತಿ, ಧರ್ಮಕ್ಕೆ ಸೀಮಿತವಲ್ಲ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಯೋಗವೆಂಬುದು ನಮಗೆ ನಾವೇ ಕಂಡುಕೊಳ್ಳುವ ಚಿಕಿತ್ಸೆ ಮತ್ತು ಅರೋಗ್ಯದ ಕಣಜ. ಯೋಗ ರೋಗಿಗಳಿಗೆ ಸಂಪೂರ್ಣ ಚಿಕಿತ್ಸಾ ಪದ್ಧತಿಯಾದರೆ, ಯೋಗಿಗಳಿಗೆ ಸಾಧನೆಯ ಮಾರ್ಗವಾಗಿದೆ. ಪ್ರತಿಯೊಬ್ಬರೂ ನಿತ್ಯದ ಬದುಕಿನಲ್ಲಿ ಯೋಗವನ್ನು ಅಳವಡಿಸಿಕೊಳ್ಳಬೇಕು ಎಂದು ಕಡಕೋಳ ಕಪ್ಪತ್ತಗಿರಿಯ ಬಸವ ಪತಂಜಲಿ ಯೋಗ ಸಮಿತಿ, ನಿಸರ್ಗ ಚಿಕಿತ್ಸಾ ಕೇಂದ್ರದ ಸಂಸ್ಥಾಪಕ ವೀರೇಶ ಗುರೂಜಿ ಹೇಳಿದರು.

ಅವರು ಬಸವ ಪತಂಜಲಿ ಯೋಗ ಸಮಿತಿ, ತಾಲೂಕು ಕಂದಾಯ, ಪೊಲೀಸ್ ಇಲಾಖೆ, ಪುರಸಭೆ, ಬಿಸಿಎನ್ ವಿದ್ಯಾ ಸಂಸ್ಥೆ, ಇನ್ನರ್‌ವೀಲ್ ಕ್ಲಬ್, ಹಿರಿಯ ನಾಗರಿಕರ ಸಂಘ, ಕದಳಿ ವೇದಿಕೆ, ಯೋಗ ಸಾಧಕರ ಸಮಿತಿ, ಸರಕಾರಿ ನೌಕರರ ಸಂಘ, ನಿವೃತ್ತ ಶಿಕ್ಷಕರ ಸಂಘ, ಪತ್ರಕರ್ತರ ಸಂಘ, ಎಫ್‌ಎಮ್‌ಸಿಜಿ ಡಿಸ್ಟ್ರಿಬ್ಯೂಟರ್



ಅಸೋಸಿಯೇಶನ್, ಮಾನವ ಹಕ್ಕುಗಳು ಹಾಗೂ ಭ್ರಷ್ಟಾಚಾರ ನಿರ್ಮೂಲನಾ ಸಂಸ್ಥೆ, ವಕೀಲರ ಸಂಘ, ವೈದ್ಯರ ಸಂಘ, ಔಷಧ ವ್ಯಾಪಾರಸ್ಥರ ಸಂಘ, ಕರ್ನಾಟಕ ಗಾಮೀಣ ಹಾಗೂ ವಿವಿಧೋದ್ದೇಶಗಳ ಸೇವಾ ಸಂಸ್ಥೆ ಲಕ್ಷೇಶ್ವರ ಇವರ ಸಂಯುಕ್ತಾಶ್ರಯದಲ್ಲಿ ಬಿಸಿಎನ್ ಸ್ಪೆಕ್ಟ್ರಮ್ ಆಂಗ್ಲ ಮಾಧ್ಯಮ ಶಾಲೆ ಆವರಣದಲ್ಲಿ ನಡೆದ ಉಚಿತ ಯೋಗ ಮತ್ತು ನಿಸರ್ಗ ಚಿಕಿತ್ಸಾ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಪ್ರಸ್ತುತ ಬದಲಾದ ಜೀವನ ಶೈಲಿಯಿಂದ ದೇಹ-ಮನಸ್ಸನ್ನು ಒಂದುಗೂಡಿಸಿ ಮನುಷ್ಯರಲ್ಲಿ ದೇಹಾರೋಗ್ಯ ಮತ್ತು ಮನೋಬಲ ಹೆಚ್ಚಿಸಲು ಯೋಗ ಪೂರಕ. ಒತ್ತಡಮುಕ್ತ ಮತ್ತು ಶಾಂತಿಯುತ ಬದುಕಿಗಾಗಿ ಯೋಗ, ಪ್ರಾಣಾಯಾಮ ಸಾಧನವಾಗಿವೆ. ಯೋಗವು ಯಾವುದೇ ಜಾತಿ, ಧರ್ಮಕ್ಕೆ ಸೀಮಿತವಾಗಿಲ್ಲ. ಅದು ಜಗತ್ತಿನ ಜನರ ಆರೋಗ್ಯಕರ ಜೀವನ ಕ್ರಮವಾಗಿದೆ. ಪ್ರತಿಯೊಬ್ಬರೂ ನಿತ್ಯ ಜೀವನದಲ್ಲಿ ಯೋಗವನ್ನು ಅಳವಡಿಸಿಕೊಂಡು ದೈಹಿಕ, ಮಾನಸಿಕ ಆರೋಗ್ಯದ ಮೂಲಕ ಸುಂದರ ಜೀವನ ನಮ್ಮದಾಗಿಸಿಕೊಳ್ಳಬೇಕು ಎಂದರು.

ಡಾ. ಶ್ರೀಕಾಂತ ಬೆಳವಿಗಿ ಮಾತನಾಡಿ, ಮನುಷ್ಯರ ದೈಹಿಕ, ಮಾನಸಿಕ ಆರೋಗ್ಯಕ್ಕೆ ಯೋಗ ಉತ್ತಮ ಅಡಿಪಾಯ. ದೈನಂದಿನ ಜೀವನದಲ್ಲಿ ಪುರುಷರು ಮತ್ತು ಮಹಿಳೆಯರು ಯೋಗಾಭ್ಯಾಸ ರೂಢಿಸಿಕೊಳ್ಳಬೇಕು. ಮಾರ್ಚ್ 1ರವರೆಗೆ ನಡೆಯುವ ಯೋಗ ಶಿಬಿರದ ಸದುಪಯೋಗವನ್ನು ಎಲ್ಲರೂ ಪಡೆದುಕೊಳ್ಳಬೇಕು ಎಂದರು.

ಕಡಕೋಳ ಕಪ್ಪತ್ತಗಿರಿಯ ಬಸವ ಪತಂಜಲಿ ಯೋಗ ನಿಸರ್ಗ ಚಿಕಿತ್ಸಾ ಕೇಂದ್ರ ಜಿಲ್ಲಾಧ್ಯಕ್ಷ ನಾಗರಾಜ ಸೂರಣಗಿ, ದಶರಥ ಕೋಟೆಗೌಡರ, ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಕ್ಷೇಮಾಬಿವೃದ್ಧಿ ಸಂಘದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ, ಔಷಧಿ ವ್ಯಾಪಾರಸ್ಥರ ಸಂಘ ಅಧ್ಯಕ್ಷ ಚಂದ್ರಶೇಖರ ಪಾಟೀಲ, ವೈ.ಎಸ್. ಕ್ಯಾಬಿಹಾಳ, ನಿರಂಜನ ವಾಲಿ, ನಾಗರಾಜ ಯಂಡಿಗೇರಿ, ಶಕುಂತಲಾ ವಡ್ಡಣ್ಣವರ, ಜಯಶ್ರೀ ಹೊಸಮನಿ, ಶೈಲಾ ಆದಿ, ನಿರ್ಮಲಾ ಅರಳಿ, ರೂಪಾ ಸಂತಿ ಮುಂತಾದವರಿದ್ದರು.

## ರಾಜ್ಯ ಸರ್ಕಾರಕ್ಕೆ ಡೆಡ್ ಲೈನ್: ಮುಷ್ಕರಕ್ಕೆ ಸಿದ್ಧತೆ ಕೈಗೊಂಡ ಖಾಸಗಿ ಸಾರಿಗೆ ಒಕ್ಕೂಟ!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿವಿಧ ಬೇಡಿಕೆ ಈಡೇರಿಸಲು ಖಾಸಗಿ ಸಾರಿಗೆ ಸಂಘಟನೆಗಳ ಒಕ್ಕೂಟವು ರಾಜ್ಯ ಸರ್ಕಾರಕ್ಕೆ ಮಾರ್ಚ್ 22ರ ಗಡುವು ನೀಡಿದೆ. ಸರ್ಕಾರದ ನಿರ್ಲಕ್ಷ್ಯದಿಂದಾಗಿ ಈ ಮುಷ್ಕರಕ್ಕೆ ಮುಂದಾಗುವುದಾಗಿ ಒಕ್ಕೂಟ ಹೇಳಿದೆ.

2023ರ ಸೆಪ್ಟೆಂಬರ್ 12ರಂದು ಖಾಸಗಿ ಸಾರಿಗೆ ಸಂಘಟನೆಗಳ ಒಕ್ಕೂಟದಿಂದ ಬೆಂಗಳೂರಲ್ಲಿ ಖಾಸಗಿ ವಾಹನಗಳ ಸಾರಿಗೆ ಮುಷ್ಕರ ಮಾಡಲಾಗಿತ್ತು. ಈ ವೇಳೆ ವಿವಿಧ ಬೇಡಿಕೆಗಳನ್ನು ಸರ್ಕಾರದ ಮುಂದೆ ಇಡಲಾಗಿತ್ತು. ಆದರೆ ಅದರಲ್ಲಿ ಪ್ರಮುಖ ಬೇಡಿಕೆಗಳನ್ನು ಇಲ್ಲಿಯವರೆಗೆ ಈಡೇರಿಸಲು ಮುಂದಾಗಿಲ್ವಂತೆ. ಅದಕ್ಕೆ ಕರ್ನಾಟಕ ರಾಜ್ಯಾದ್ಯಂತ ಖಾಸಗಿ ಸಾರಿಗೆ ಮುಷ್ಕರ ಮಾಡಲು ಸಿದ್ದತೆ ಮಾಡಿಕೊಳ್ಳಲಾಗುತ್ತಿದೆ.

ಬುಧವಾರ ಸುದ್ದಿಗೋಷ್ಠಿ ನಡೆಸಿದ ಖಾಸಗಿ ಸಾರಿಗೆ ಸಂಘಟನೆಗಳ ಒಕ್ಕೂಟ, ಸಿಎಂ ಸಿದ್ದರಾಮಯ್ಯಗೆ ಮಾರ್ಚ್– 22 ರೊಳಗೆ ನಾಲ್ಕು ಪ್ರಮುಖ ಬೇಡಿಕೆಗಳನ್ನು ಈಡೇರಿಸಬೇಕು. ಇಲ್ಲದಿದ್ದರೆ ಮಾ. 24ಕ್ಕೆ ಮತ್ತೆ ಖಾಸಗಿ ಸಾರಿಗೆ ಸಂಘಟನೆಗಳ ಒಕ್ಕೂಟದ ಸಭೆ ಕರೆದು ಕರ್ನಾಟಕ ಸಾರಿಗೆ ಮುಷ್ಕರಕ್ಕೆ ಕರೆ ನೀಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

ಇನ್ನೂ ಕಳೆದ ಬಾರಿ ಬೆಂಗಳೂರು ಬಂದ್ ಮಾಡಿದ್ದೇವು. ಈ ಬಾರಿ ಕರ್ನಾಟಕ ಬಂದ್ ಮಾಡಬೇಕಾಗುತ್ತೆ. 4 ಬೇಡಿಕೆ ಈಡೇರಿಸಲು ಮಾರ್ಚ್ 22ರ ವರೆಗೆ ಸಿಎಂ ಸಿದ್ದರಾಮಯ್ಯ ಅವರಿಗೆ ಗಡುವು ನೀಡಲಾಗಿದೆ. ನಮ್ಮ ಬೇಡಿಕೆಗಳನ್ನು ಈಡೇರಿಸಲು ಮುಂದಾಗಿಲ್ಲ ಎಂದರೆ ಇಡೀ ಕರುನಾಡೇ ಸ್ತಬ್ಧ ಆಗಲಿದೆ. ಎಲ್ಲಾ ಸಾರಿಗೆ ವ್ಯವಸ್ಥೆ ಬಂದ್ ಆಗುತ್ತೆ ಆಟೋ, ಬಸ್, ಟ್ಯಾಕ್ಸಿ, ಸ್ಕೂಲ್ ಬಸ್ ಗೂಡ್ಸ್ ವಾಹನಗಳು ಬಂದ್ ಆಗುತ್ತೆ. 2023ರ ಬಂದ್‌ಗೆ 32 ಸಂಘಟನೆ ಬೆಂಬಲ ಕೊಟ್ಟಿತ್ತು. ಈ ಬಾರಿ 65 ರ ಸಂಘಟನೆ ಬೆಂಬಲ ಇದೆ. ನಮ್ಮ ಬೇಡಿಕೆ ಈಡೇರದಿದ್ದರೆ ಬಂದ್ ಮಾಡಿ ಖಾಸಗಿ ಒಕ್ಕೂಟದ ತಾಕತ್ತು ಏನೂ ಅನ್ನೋದನ್ನ ತೋರಿಸ್ತೇವೆ ಖಾಸಗಿ ಸಾರಿಗೆ ಸಂಘಟನೆಗಳ ಒಕ್ಕೂಟ ಅಧ್ಯಕ್ಷ ನಟರಾಜ್ ಶರ್ಮ ಹೇಳಿದ್ದಾರೆ.

ಬಂದ್ ಬಗ್ಗೆ ಗೊಂದಲ ಮಾಡಿಕೊಳ್ಳಲ್ಲ. ಎಕ್ಸಾಂ ದಿನಗಳನ್ನ ನೋಡಿ ಕರ್ನಾಟಕ ಬಂದ್ ನಿರ್ಧಾರ ಮಾಡುತ್ತೇವೆ. ಸಿಎಂ ಬಜೆಟ್ ನಲ್ಲಿ ಬ್ಯೂಸಿ ಇದ್ದಾರೆ. ಸಿಎಂ ಸಮಯ ಕೊಟ್ಟರೆ ಹೋಗಿ ಭೇಟಿಯಾಗಿ ಮಾತುಕತೆ ಮಾಡುತ್ತೇವೆ ಎಂದಿದ್ದಾರೆ.




ಗದುಗಿನ ಅಡವೀಂದ್ರಸ್ವಾಮಿ ಮಠದಲ್ಲಿ ಶ್ರೀಮಠದ ಕೃಪಾಶ್ರಯದಲ್ಲಿ ಶ್ರೀಗುರು ಪಂಚಾಕ್ಷರಿ ಸೇವಾ ಸಮಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಜರುಗಿದ 333ನೇ ಶಿವಾನುಭವ, ಗಾನಯೋಗಿ ಪಂಚಾಕ್ಷರಿ ಸಂಗೀತ ಪರಂಪರಾ ಸಮ್ಮೇಳನದಲ್ಲಿ ಅಂತಾರಾಷ್ಟ್ರೀಯ ಖ್ಯಾತ ಗಾಯಕ, ಧಾರವಾಡದ ಪದ್ಮಶ್ರೀ ಪಂ. ಎಂ. ವೆಂಕಟೇಶಕುಮಾರ ಸೇರಿದಂತೆ ಡಾ. ಸಿದ್ಧರಾಮಯ್ಯ ಮಠಪತಿ, ಡಾ. ನಾರಾಯಣ ಹಿರೇಕೊಳಚಿ, ಡಾ. ಗುರುಬಸವ ಮಹಾಮನಿ, ಡಾ. ಹನುಮಂತ ಕೊಡಗಾನೂರ, ಡಾ. ಶಿವಬಸಯ್ಯ ಗಡ್ಡದಮಠ, ಪ್ರೊ. ಎಂ.ಎಸ್. ಮಠದ, ಸುಕ್ರುಸಾಬ ಮುಲ್ಲಾ, ರೇಷ್ಮಾ ಭಟ್, ಶರಣಕುಮಾರ ಗುತ್ತರಗಿ, ಬಸವರಾಜ ಹಿರೇಮಠ, ಕೃತಿಕಾ ಜಂಗಿನಮಠ, ಭೀಮಾಶಂಕರ ಬಿದನೂರ ಮುಂತಾದ ಸಂಗೀತ ಕಲಾವಿದರಿಂದ ಜರುಗಿದ ಸಂಗೀತ ಕಾರ್ಯಕ್ರಮ ಜನಮನ ಸೆಳೆಯಿತು.

### ಮಾರ್ಚ್ 8, ಅಂತಾರಾಷ್ಟ್ರೀಯ ಮಹಿಳಾ ದಿನದ ನಿಮಿತ್ತ ಲೇಖನ

## ನಾರಿಯರ ವಿಶ್ವ ರೂಪಗಳು

ನಾರಿ ಶಕ್ತಿಯನ್ನು ಸೃಷ್ಟಿಯ ಆದಿಶಕ್ತಿ ಎಂದು ಮಹಿಮೆ ಮಾಡಲಾಗಿದೆ. ನಾರಿಯು ಸಮಾಜದ ಅತ್ಯಂತ ಶ್ರೇಷ್ಠ ಭಾಗವಾಗಿದ್ದಾಳೆ. ನಾರಿ ಸ್ವರ್ಗಕ್ಕೆ ದಾರಿ ಎಂಬುದು ಎಲ್ಲರೂ ತಿಳಿದ ಸತ್ಯವಾಗಿದೆ. ನಾರಿ ಒಬ್ಬಳು ಕಲಿತರೆ ಶಾಲೆಯೊಂದು ತೆರೆದಂತೆ ಎಂಬ ನಾಣ್ಣುಡಿ ಸಾರ್ಥಕವಾಗಿದೆ. ನಾರಿಯು ಸಮಾಜದ ಚುಕ್ಕಾಣಿಯನ್ನು ಹಿಡಿದು ಅಭಿವೃದ್ಧಿಯ ಕಡೆಗೆ ಕರೆದೊಯ್ಯುವ ಸಾಧಕಿಯಾಗಿದ್ದಾಳೆ.

ಆದರೆ, ಶತಮಾನಗಳಿಂದ ನಾರಿಯನ್ನು ಒಂದು ವಸ್ತು ಎಂದು ಹಾಗೂ ಪುರುಷನ ಸಂಪತ್ತು ಎಂದು ಭಾವಿಸಲಾಗುತ್ತಿತ್ತು. ನಾರಿಯನ್ನು ಪುರುಷನು ತನಗೆ ಬೇಕಾದ ರೀತಿಯಲ್ಲಿ ಬಳಸಬಹುದು ಹಾಗೂ ಆಕೆಯ ಮನೋಬಲವನ್ನು ಮುರಿದು ಆಕೆಯ ಭಾವನೆಗಳಿಗೆ ಬೆಲೆಯೇ ಇಲ್ಲದಂತೆ ಮಾಡಿದ್ದ. ಆದರೆ ಈ ಎಲ್ಲಾ ಸವಾಲುಗಳನ್ನು ಮೆಟ್ಟಿ ನಿಂತು ನಾರಿಯು ವಿಜಯವನ್ನು ಪ್ರಾಪ್ತಿ ಮಾಡಿಕೊಂಡು ಇತಿಹಾಸದಲ್ಲಿ ತನ್ನ ಹೆಸರನ್ನು ಅಮರಗೊಳಿಸಿದ್ದಾಳೆ.

ವೈದಿಕ ಕಾಲದ ನಾರಿಯು ಪುರುಷನ ಸಮಾನ ಸ್ಥಾನಮಾನ ಪಡೆದು ಆನಂದಿಸಿದ್ದಾಳೆ. ಆ ಕಾಲದ ಮಹಿಳೆಯು ಸುಶಿಕ್ಷಿತಳಾಗಿದ್ದು ಆಕೆಯ ವಿವಾಹವು ಬಯಸಿದವರೊಂದಿಗೆ ಪರಿಪಕ್ವ ವಯಸ್ಸಿನಲ್ಲಿ ನೆರವೇರುತ್ತಿತ್ತು.

ಮಧ್ಯಕಾಲದಲ್ಲಿ ಸ್ತ್ರೀಯರ ಸ್ಥಾನಮಾನವು ಇಳಿಯಿತು. ಬಾಲ್ಯವಿವಾಹ, ಪುನರ್ವಿವಾಹದ ತಡೆ, ಬಹು ವಿವಾಹ, ದೇವದಾಸಿ ಪದ್ಧತಿ, ರಜಪೂತ ನಾರಿಯರ ಸತಿ ಸಹಗಮನ




ಪದ್ಧತಿಯಂತಹ ಅನಿಷ್ಟ ಪದ್ಧತಿಗಳು ನಾರಿಯನ್ನು ಬಂಧಿಸಿದವು. ಆದರೂ ಈ ಸಮಯದಲ್ಲಿ ಅನೇಕ ವೀರ ನಾರಿಯರು ರಾಜಕೀಯ, ಸಾಹಿತ್ಯ, ಶಿಕ್ಷಣ ಮತ್ತು ಧಾರ್ಮಿಕ ಕ್ಷೇತ್ರದಲ್ಲಿ ವಿಶಿಷ್ಟ ಸಾಧನೆಯನ್ನು ಮೆರೆದಿದ್ದಾರೆ. ರಜಿಯಾ ಸುಲ್ತಾನ್, ರಾಣಿ ದುರ್ಗಾವತಿ, ರಾಣಿ ನೂರ್ಜಹಾನ್, ಶಿವಾಜಿಯ ತಾಯಿ ಜೀಜಾಬಾಯಿ ಮುಂತಾದ ಮಹಿಳೆಯರು ನಾರಿಕುಲಕ್ಕೆ ಗೌರವವನ್ನು ತಂದುಕೊಟ್ಟಿದ್ದಾರೆ. ಮೀರಾಬಾಯಿಯು ಭಕ್ತಿ ಇತಿಹಾಸದಲ್ಲಿ ಸ್ವತಃ ಇತಿಹಾಸವಾಗಿದ್ದಾಳೆ.

ಬ್ರಿಟಿಷರ ರಾಜ್ಯಾವಧಿಯಲ್ಲಿ ನಾರಿಯರ ವಿಕಾಸವು ಮಂದಗತಿಯನ್ನು ಪಡೆಯಿತು. ನಾರಿಯರಿಗೆ ಶಿಕ್ಷಣಪಡೆಯುವ ಅವಕಾಶ ದೊರೆತರೂ ಅಷ್ಟಾಗಿ ಮುಂದುವರೆಯಲಿಲ್ಲ. ರಾಣಿ ಲಕ್ಷ್ಮೀಬಾಯಿಯು ವೀರಾವೇಶದಿಂದ ಬ್ರಿಟಿಷರ ವಿರುದ್ಧ ಹೋರಾಡಿ ಅವರನ್ನು ಮಣಿಸಿದಳು. ಸ್ವಾತಂತ್ರ್ಯ ಹೋರಾಟದಲ್ಲಿ ಎನಿಬೆಸೆಂಟ್, ವಿಜಯಲಕ್ಷ್ಮೀ ಪಂಡಿತ್, ಕಸ್ತೂರಿ ಬಾಯಿ ಮುಂತಾದ ಧೀರ ಮಹಿಳೆಯರು ಭಾಗವಹಿಸಿದರು. ಲಕ್ಷ್ಮೀ ಸಹಗಲ್, ಸುಭಾಷ್ಚಂದ್ರ ಬೋಸ್‌ರ ಸೇನೆಯ ಕ್ಯಾಪ್ಟನ್ ಆಗಿದ್ದರು.

ಸ್ವತಂತ್ರ ಭಾರತದ ಸಂವಿಧಾನದಲ್ಲಿ ನಾರಿಗೆ ಗೌರವ, ರಕ್ಷಣೆ, ಅಧಿಕಾರಗಳು ಪುರುಷನ ಸಮಾನ ದೊರೆತರೂ ಅನಕ್ಷರತೆ, ಪುರಾತನ ರೂಢಿವಾದಿ ವಿಚಾರಗಳು, ದುರ್ಬಲ ಸಾಮಾಜಿಕ ವ್ಯವಸ್ಥೆಯ ಕಾರಣ ಅವಕಾಶ ಹಾಗೂ ಅಧಿಕಾರದ ಲಾಭವನ್ನು ಸಂಪೂರ್ಣವಾಗಿ ಮಹಿಳೆಯು ಪಡೆಯುವಲ್ಲಿ ಅಸಫಲಳಾದಳು. ಆದರೆ ಸ್ವತಂತ್ರ ಭಾರತದ ಇತಿಹಾಸವು ನಾರಿಯರ ಗೌರವ ಕಥೆಗಳಿಂದ ತುಂಬಿದೆ. ಶ್ರೀಮತಿ ಇಂದಿರಾ ಗಾಂಧಿಯವರು 1966ರಲ್ಲಿ ದೇಶದ ಪ್ರಥಮ ಮಹಿಳಾ ಪ್ರಧಾನ ಮಂತ್ರಿಯಾದರು. ಶ್ರೀಮತಿ ಸುಚೇತಕೃಪಲಾನಿ, ಉತ್ತರಪ್ರದೇಶದ ಮುಖ್ಯಮಂತ್ರಿಯಾದರೆ, ಕಿರಣ್ ಬೇಡಿಯವರು ಪ್ರಥಮ ಮಹಿಳಾ ಐಪಿಎಸ್ ಅಧಿಕಾರಿಯಾದರು. ಇನ್ನೂ ಅನೇಕಾನೇಕ ಮಹಿಳೆಯರು ತಮ್ಮ ಹೆಸರನ್ನು ಸ್ವರ್ಣಿಮ ಅಕ್ಷರಗಳಲ್ಲಿ ಸದಾಕಾಲ ಅಂಕಿತಗೊಳಿಸಿದ್ದಾರೆ.

ಸ್ವತಂತ್ರ ಭಾರತದ ರಜತ ಮಹೋತ್ಸವದ ನಂತರ ವೈಜ್ಞಾನಿಕವಾಗಿ ಮುಂದುವರೆದ ಭಾರತದಲ್ಲಿ ನಾರಿಯು ಪ್ರತಿಯೊಂದು ಕ್ಷೇತ್ರದಲ್ಲಿ ಪುರುಷನಿಗೆ ಸರಿಸಮಾನವಾಗಿ ಕಾರ್ಯನಿರ್ವಹಿಸುತ್ತಿದ್ದಾಳೆ. ಉನ್ನತ ಶಿಕ್ಷಣ ಪಡೆದ ಇಂದಿನ ನಾರಿಯು ಡಾ–ಕ್ಟರ್, ಇಂಜಿನಿಯರ್, ವಿಜ್ಞಾನಿ ಹಾಗೂ ಅಂತರಿಕ್ಷಯಾತ್ರಿಯಾಗಿ ಸರ್ವೋನ್ನತ ಸ್ಥಾನದಲ್ಲಿ ಆಸೀನಳಾಗಿದ್ದಾಳೆ.

1936ರಲ್ಲಿ ಸ್ಥಾಪನೆಯಾದ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಆಡಳಿತವು ಸಂಪೂರ್ಣವಾಗಿ ನಾರಿಶಕ್ತಿಯಿಂದಲೇ ನಡೆಯುವ ವಿಶ್ವದ ಏಕೈಕ ಆಧ್ಯಾತ್ಮಿಕ ಹಾಗೂ ನೈತಿಕ ಶಿಕ್ಷಣ ಸಂಸ್ಥೆಯಾಗಿದೆ. ಇಲ್ಲಿ ಶಿಕ್ಷಣ ಪಡೆದ ನಾರಿಯರು ಭಾರತದ ಸಂಸ್ಕೃತಿ ಮತ್ತು ಸಭ್ಯತೆಯನ್ನು ಕಾಪಾಡುತ್ತಾ, ಶ್ರೇಷ್ಠ ಮಾರ್ಗದಲ್ಲಿ ನಡೆಯುವ ದಾರಿಯನ್ನು ಸರ್ವರಿಗೂ ತೋರುತ್ತಿದ್ದಾರೆ. ಮನ ಹಾಗೂ ಮನೆಗಳನ್ನು ಸುಖ, ಶಾಂತಿ, ಸಮೃದ್ಧಿಯನ್ನು ತುಂಬುತ್ತಿದ್ದಾಳೆ.

ನಾರಿಯು ಅನ್ನಪೂರ್ಣೆಯಾಗಿ ಮನೆಯಲ್ಲಿಯೂ ದುಡಿಯುತ್ತಾ, ಜ್ಞಾನ ನೀಡುವ ಸರಸ್ವತಿಯಾಗಿ, ದುರ್ಗುಣಗಳನ್ನು ಕಳೆಯುವ ದುರ್ಗಾದೇವಿಯಾಗಿ, ಸರ್ವರ ಮನೋಕಾಮನೆಗಳನ್ನು ಪೂರ್ಣಗೊಳಿಸುವ ಕಾಮಧೇನುವಾಗಿ, ಜೀವನವನ್ನು ಸಂತೋಷದಿಂದ ತುಂಬುವ ಸಂತೋಷಿ ಮಾತೆಯಾಗಿ, ಪರಮಾತ್ಮ ಶಿವನ ಜ್ಞಾನಗಂಗೆಯನ್ನು ಹರಿಸಿ ಅಜ್ಞಾನದ ಕತ್ತಲನ್ನು ದೂರಮಾಡುವ ಪವಿತ್ರ ಗಂಗೆಯಾಗಿ, ಜೀವನದ ಏಳು ಬೀಳುಗಳಲ್ಲಿ ಧೈರ್ಯ ನೀಡುವ ಧೈರ್ಯಲಕ್ಷ್ಮಿಯಾಗಿ, ಸರ್ವರನ್ನು ವಿಜಯಮಾರ್ಗದಲ್ಲಿ ಕೊಂಡೊಯ್ಯುವ ವಿಜಯಲಕ್ಷ್ಮಿಯಾಗಿ ಕಾರ್ಯನಿರ್ವಹಿಸುತ್ತಿದ್ದಾಳೆ.

**– ಉಮಾದೇವಿ.**
**ಉಪನ್ಯಾಸಕರು, ದಾವಣಗೆರೆ.**

## ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ

ಅಂತಾರಾಷ್ಟ್ರೀಯ ಮಹಿಳಾ ದಿನವನ್ನು ವಿಶ್ವದಾದ್ಯಂತ ಅನೇಕ ದೇಶಗಳಲ್ಲಿ ಮಾರ್ಚ್ 8ರಂದು ಆಚರಿಸಲಾಗುತ್ತದೆ. ಲಿಂಗ ತಾರತಮ್ಯದಿಂದ ಮುಕ್ತವಾದ ಉತ್ತಮ ಸಮಾಜವನ್ನು ನಿರ್ಮಿಸಲು ಮತ್ತು ಲಿಂಗ ಸಮಾನತೆಯ ಸಂದೇಶವನ್ನು ನೀಡಲು ಪ್ರತಿವರ್ಷ ಈ ದಿನವನ್ನು ವಿಶೇಷವಾಗಿ ಆಚರಣೆ ಮಾಡುತ್ತಾರೆ. 2025ರ ಅಂತಾರಾಷ್ಟ್ರೀಯ ಮಹಿಳಾ ದಿನದ ಧ್ಯೇಯವಾಕ್ಯ 'ಕ್ರಿಯೆಯನ್ನು ವೇಗಗೊಳಿಸಿ' ಎಂದಾಗಿದೆ.

ಹೆಣ್ಣಿಲ್ಲದೆ ಜೀವವಿಲ್ಲ, ಹೆಣ್ಣಿಲ್ಲದೆ ಜೀವನವಿಲ್ಲ, ಹೆಣ್ಣಿನಿಂದಲೇ ಬಾಳು ಬಂಗಾರ, ಹೆಣ್ಣಿಲ್ಲದ ಬದುಕು ನಿಸ್ಸರ, ಹೆಣ್ಣನ್ನು ಗೌರವಿಸಿ, ಹೆಣ್ಣು ಮಕ್ಕಳನ್ನು ರಕ್ಷಿಸಿ. ನೇರಳೆ, ಹಸಿರು ಮತ್ತು ಬಿಳಿ ಬಣ್ಣಗಳು ಅಂತಾರಾಷ್ಟ್ರೀಯ ಮಹಿಳಾ ದಿನದ ಬಣ್ಣಗಳಾಗಿವೆ. ನೇರಳೆ ನ್ಯಾಯ ಮತ್ತು ಘನತೆಯನ್ನು ಸೂಚಿಸುತ್ತದೆ. ಹಸಿರು




ಭರವಸೆಯನ್ನು ಸಂಕೇತಿಸುತ್ತದೆ ಮತ್ತು ಬಿಳಿ ಶುದ್ಧತೆಯನ್ನು ಪ್ರತಿನಿಧಿಸುತ್ತದೆ. ನಾರಿಶಕ್ತಿಯನ್ನು ಸೃಷ್ಟಿಯ ಆದಿಶಕ್ತಿ ಎಂದು ಕರೆಯುತ್ತಾರೆ. ನಾರಿಯು ಸಮಾಜದ ಅತ್ಯಂತ ಶ್ರೇಷ್ಠ ಭಾಗವಾಗಿದ್ದಾಳೆ. ನಾರಿ ಸ್ವರ್ಗಕ್ಕೆ ದಾರಿಯಾಗಿದ್ದಾಳೆ.

ನಾರಿಯು ಸಮಾಜದ ಚುಕ್ಕಾಣಿಯನ್ನು ಹಿಡಿದು ಅಭಿವೃದ್ಧಿಯ ಕಡೆಗೆ ಕರೆದೊಯ್ಯುವ ಸಾಧಕಿಯಾಗಿದ್ದಾಳೆ. ಬ್ರಹ್ಮಾಕುಮಾರಿ ಸಂಸ್ಥೆಯು ವಿಶೇಷವಾಗಿ ಮಹಿಳೆಯರ ಉನ್ನತಿಗಾಗಿ ಜಾಗತಿಕ ಮಟ್ಟದಲ್ಲಿ ಇರುವ ಏಕೈಕ ಸಂಸ್ಥೆಯಾಗಿದೆ. ಭಾರತ ದೇಶದಲ್ಲಿ ಸುಮಾರು 60 ಸಾವಿರ ಸಮರ್ಪಿತ ಕನ್ಯೆಯರು, ಭಗಿನಿಯರು 8500 ಶಾಖೆಗಳಲ್ಲಿ ಕಾರ್ಯನಿರತವಾಗಿದ್ದಾರೆ. ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯವು ಪ್ರತಿವರ್ಷದಂತೆ ಮಹಿಳಾ ದಿನಾಚರಣೆಯನ್ನು ವಿಶ್ವದಾದ್ಯಂತ ತನ್ನ ಸಾವಿರಾರು ಶಾಖೆಗಳಲ್ಲಿ ವಿಶಿಷ್ಟ ರೀತಿಯಲ್ಲಿ ಆಚರಿಸುತ್ತದೆ. ಈ ವರ್ಷದ ಧ್ಯೇಯವಾಕ್ಯ 'ಮೌಲ್ಯಾಧಾರಿತ ಸಮಾಜದ ನಿರ್ಮಾಣದಲ್ಲಿ ಮಹಿಳೆಯರ ಪಾತ್ರ' ಎಂಬುದಾಗಿದೆ.

ಅನೇಕ ಮಹಿಳಾ ಕಾರ್ಯನಿರತ ಸಂಘಟನೆಗಳ ಜೊತೆಗೂಡಿ ಸೆಮಿನಾರ್, ವಿಚಾರಗೋಷ್ಠಿ, ಮಹಿಳಾ ಸಪ್ತಾಹ, ಸನ್ಮಾನ ಸಮಾರಂಭಗಳನ್ನು ಆಯೋಜಿಸಲಾಗುತ್ತದೆ. ವರ್ತಮಾನದಲ್ಲಿ 102 ವರ್ಷದ ರಾಜಯೋಗಿನಿ ರತನಮೋಹಿನಿ ದಾದಿಯವರು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ಮುಖ್ಯ ಆಡಳಿತಾಧಿಕಾರಿಯಾಗಿ 21 ವಿಭಾಗಗಳ ಮೂಲಕ ವಿಶ್ವದಾದ್ಯಂತ ಆಧ್ಯಾತ್ಮಿಕ ಹಾಗೂ ನೈತಿಕ ಶಿಕ್ಷಣವನ್ನು ಹರಡುವ ಸೇವೆ ಮಾಡುತ್ತಿದ್ದಾರೆ.

1937ರಲ್ಲಿ ದಾದಾ ಲೇಖರಾಜ ಅವರ ಮೂಲಕ ನಿರಾಕಾರ ಶಿವ ಪರಮಾತ್ಮನು ಈಶ್ವರೀಯ ವಿಶ್ವ ವಿದ್ಯಾಲಯದ ಸ್ಥಾಪನೆ ಮಾಡಿದನು. ಜಗದಂಬೆ ಸರಸ್ವತಿ ಅವರು ತಮ್ಮ ಸರ್ವಸ್ವವನ್ನು ಪ್ರಭುವಿಗೆ ಅರ್ಪಣೆ ಮಾಡಿದರು. 1937ರ ಅಕ್ಟೋಬರ್ ತಿಂಗಳಲ್ಲಿ ಅವರ ಜೊತೆಗೂಡಿ ಅನ್ಯಜ್ಞಾನ ಪಾರಂಗತ ಕನ್ಯೆಯರು, ಮಾತೆಯರು, ಈಶ್ವರೀಯ ಕಾರ್ಯದಲ್ಲಿ ತಮ್ಮ ತನು–ಮನ–ಧನವನ್ನು ಸರ್ಮಪಣೆ ಮಾಡಿ, ಕಾರ್ಯಕಾರಿಣಿ ಸಮಿತಿಯನ್ನು ರಚಿಸಿದರು. ಕನ್ಯೆಯಾಗಿರುವ ಜಗದಂಬೆ ಅವರು ಸುಮಾರು 350ಕ್ಕೂ ಹೆಚ್ಚು ಯಜ್ಞವತ್ಸರಿಗೆ, ಸಾವಿರಾರು ಬ್ರಹ್ಮಾವತ್ಸರಿಗೆ ಮಮತೆಯ ತಾಯಿಯಾಗಿ ಪಾಲನೆ ನೀಡಿ, ಜ್ಞಾನ–ಯೋಗದಿಂದ, ದೈವಿ ಗುಣಗಳಿಂದ ಶೃಂಗರಿಸಿ ಯೋಗಿಗಳನ್ನಾಗಿ ಮಾಡಿದರು.

**– ವಿಶ್ವಾಸ ಸೋಹೋನಿ.**
**ಬ್ರಹ್ಮಾಕುಮಾರಿಸ್ ಮೀಡಿಯಾ ವಿಂಗ್.**

## ಪುಟಾಣಿ ಮಕ್ಕಳಿಂದ 'ಅಂಗನವಾಡಿ ಹಬ್ಬ'

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಮಾಡಳ್ಳಿ ಗ್ರಾಮದ ಅಂಗನವಾಡಿ ಕೇಂದ್ರ ಸಂಖ್ಯೆ 36ರಲ್ಲಿ ಪುಟಾಣಿ ಮಕ್ಕಳಿಂದ ಅಂಗನವಾಡಿ ಹಬ್ಬ ಕಾರ್ಯಕ್ರಮವನ್ನು ಆಚರಿಸಲಾಯಿತು.



ಪ್ರಾಥಮಿಕ ಶಾಲಾ ಹಂತದಲ್ಲಿ ಚಿಣ್ಣರ ಮೇಳ, ಕಲಿಕಾ ಹಬ್ಬ, ಕಲೋತ್ಸವ, ಪ್ರತಿಭಾ ಕಾರಂಜಿ, ವಾರ್ಷಿಕೋತ್ಸವದಂತಹ ಅನೇಕ ಕಾರ್ಯಕ್ರಮಗಳು ನಡೆಯುತ್ತವೆ. ಆದರೆ ಅಂಗನವಾಡಿ ಕೇಂದ್ರಗಳಲ್ಲಿ ತಾಲೂಕು ವ್ಯಾಪ್ತಿಯಲ್ಲಿಯೇ ಪ್ರಥಮ ಎನ್ನಬಹುದಾದ ಈ ಅಂಗನವಾಡಿ ಹಬ್ಬ ಹೊಸತನವನ್ನು ಸೃಷ್ಟಿ ಮಾಡಿದ್ದು, ಚಿಣ್ಣರು ವಿವಿಧ ವೇಷಭೂಷಣಗಳಿಂದ ಕಂಗೊಳಿಸಿದರು.

ಇದೇ ಮಾದರಿಯಲ್ಲಿ ಮಂಗಳವಾರ ಮಾಡಳ್ಳಿ ಗ್ರಾಮದ ಮಕ್ಕಳ ಜಾಗೃತಿ ಸಂಸ್ಥೆಯ ಸಹಯೋಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪುಟಾಣಿ ಮಕ್ಕಳ ಪಾಲಕರು, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಉತ್ಸಾಹದಿಂದ ಅಂಗನವಾಡಿ ಹಬ್ಬದಲ್ಲಿ ಪಾಲ್ಗೊಂಡಿದ್ದರು. ಮಕ್ಕಳು ಹಳ್ಳಿಯ ಸೊಗಡಿನ ಸಾಂಪ್ರದಾಯಿಕ ವೇಷಭೂಷಣಗಳಲ್ಲಿ ಅಪ್ಪಟ ದೇಸೀ ಸೊಗಡಿನಲ್ಲಿ ಕಂಡುಬಂದರು. ಅಲ್ಲದೆ ಅಂಗನವಾಡಿ ಶಿಕ್ಷಕಿಯಾಗಿ ಓರ್ವ ವಿದ್ಯಾರ್ಥಿ ಪಾಠ ಹೇಳಿದ್ದು ಸಹ ಗಮನ ಸೆಳೆಯಿತು.

ಯಳವತ್ತಿ ವಲಯದಲ್ಲಿ ಮಕ್ಕಳ ಜಾಗೃತಿ ಸಂಸ್ಥೆಯವರು ಉತ್ತಮ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು, ತಾಲೂಕು ವ್ಯಾಪ್ತಿಯ ಮಾಡಳ್ಳಿ ಗ್ರಾಮದ ಕೇಂದ್ರ ಸಂಖ್ಯೆ 36ರಲ್ಲಿ ಅಂಗನಾಡಿ ಹಬ್ಬ ಆಚರಣೆ ವಿನೂತನ ಪ್ರಯೋಗವಾಗಿದೆ. ಮಕ್ಕಳ ಪ್ರತಿಭೆಗೆ ಇದೊಂದು ವೇದಿಕೆಯಾಗಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಿಡಿಪಿಓ ಮೃತ್ಯುಂಜಯ ಜಿ ಅಭಿಪ್ರಾಯಪಟ್ಟರು.

ಶಾಲಾ ಹಂತದ ಮಕ್ಕಳಿಗೆ ಮಾತ್ರ ಸೀಮಿತವಾಗುತ್ತಿದ್ದ ಮಕ್ಕಳ ಹಬ್ಬವನ್ನು ಅಂಗನವಾಡಿ ಹಬ್ಬವನ್ನಾಗಿ ಆಚರಣೆ ಮಾಡಲು ನಿರ್ಧರಿಸಿದಾಗ ಇಲಾಖೆ ಅಧಿಕಾರಿಗಳು, ಗ್ರಾಮದ ನಾಗರಿಕರು, ಮಕ್ಕಳ ಜಾಗೃತಿ ಸಂಸ್ಥೆಯವರು ಸಹಕಾರ ನೀಡಿದ್ದು, ಮಕ್ಕಳಿಗೆ ನಮ್ಮ ಸಂಪ್ರದಾಯ, ಸಂಸ್ಕೃತಿಗಳನ್ನು ತಿಳಿಸಿಕೊಡುವ ಕಾರ್ಯ ಮಾಡಲಾಗಿದೆ ಎಂದು ಅಂಗನವಾಡಿ ಕಾರ್ಯಕರ್ತೆ ಈರಮ್ಮ ಅಂಗಡಿ ಸಂತಸ ವ್ಯಕ್ತಪಡಿಸಿದರು.

## ದೇವಾಲಯಗಳ ನಿಧಿ ಲೂಟಿ: ಖಂಡನೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಹಿಂದೂ ಧಾರ್ಮಿಕ ದತ್ತಿ ಇಲಾಖೆಯ ಕೆಲವು ಅಧಿಕಾರಿಗಳು ದೇವಸ್ಥಾನಗಳಿಗೆ ಸೇರಬೇಕಾದ ಕೋಟ್ಯಾಂತರ ರೂಪಾಯಿಗಳನ್ನು ಲೂಟಿ ಮಾಡುತ್ತಿರುವ ವಿಷಯ ಬೆಳಕಿಗೆ ಬಂದಿದೆ. ಈ ಭ್ರಷ್ಟಾಚಾರವನ್ನು ಕರ್ನಾಟಕ ಮಂದಿರ ಮಹಾಸಂಘವು ತೀವ್ರವಾಗಿ ಖಂಡಿಸುವುದರೊಂದಿಗೆ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ತಕ್ಷಣ ಕಠಿಣ ಕಾನೂನು ಕ್ರಮ ಜರುಗಿಸುವಂತೆ ಗದಗಿನಲ್ಲಿ ಮಂದಿರ ಮಹಾಸಂಘದ ಸದಸ್ಯರು ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು.



ಇಲಾಖೆಯ ಮುದ್ರೆ ನಕಲಿ ಮಾಡಿ, ಧಾರ್ಮಿಕ ದತ್ತಿ ಇಲಾಖೆಯ 60 ಲಕ್ಷ ರೂಪಾಯಿಗಳನ್ನು ತನ್ನ ಹೆಂಡತಿ ಮತ್ತು ಸಂಬಂಧಿಕರ ಖಾತೆಗೆ ವರ್ಗಾವಣೆ ಮಾಡಿದ್ದಾರೆ. ಲಿಂಗಸುಗೂರಿನ ತಹಸೀಲ್ದಾರ್ ಕಚೇರಿಯ ದ್ವಿತೀಯ ದರ್ಜೆಯ ಸಹಾಯಕರು ದೇವಸ್ಥಾನಗಳ ಅರ್ಚಕರಿಗೆ ಮೀಸಲಿಟ್ಟ ಹಣವನ್ನು ತನ್ನ ಹೆಂಡತಿ, ಮಕ್ಕಳ ಹೆಸರಿನಲ್ಲಿ ನಕಲಿ ಬ್ಯಾಂಕ್ ಖಾತೆಗಳನ್ನು ತೆ–ರೆದು ಅಕ್ರಮವಾಗಿ ವರ್ಗಾವಣೆ ಮಾಡಿಕೊಂಡಿದ್ದಾರೆ.

ಈ ಪ್ರಕರಣಗಳು ಗಂಭೀರ ಸ್ವರೂಪದ್ದಾಗಿರುವುದರಿಂದ ವಿಶೇಷ ತನಿಖಾ ತಂಡವನ್ನು ನೇಮಿಸಬೇಕು ಮತ್ತು ತಪ್ಪಿತಸ್ಥ ಅಧಿಕಾರಿಗಳನ್ನು ತಕ್ಷಣ ಅಮಾನತುಗೊಳಿಸಿ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಗಣ್ಯರಾದ ಮಲ್ಲಿಕಾರ್ಜುನ ಸಂತೋಜಿ, ನಾರಾಯಣ ಜನಿವಾರದ, ಸಂಜೀವ ಚವ್ಹಾಣ, ಅನಿಲ ಇರಕಲ್, ರಾಣಿ ಚಂದಾವರಿ, ಅನುಶ್ರೀ ಮುಧೋಳ, ರೂಪಾ ಹೂವಿನಹಳ್ಳಿ ಮುಂತಾದವರಿದ್ದರು.

### ಮನೆ ಕೆಡವಿದ್ದಕ್ಕೆ ಸುಪ್ರೀಂ ಕೋರ್ಟ್‌ನಿಂದ ಯೋಗಿ ಸರಕಾರ ತರಾಟೆಗೆ

## ನಿಮ್ಮದೇ ಖರ್ಚಿನಲ್ಲಿ ಮರು ನಿರ್ಮಾಣಕ್ಕೆ ಆದೇಶಿಸುತ್ತೇವೆ

■ ವಿಜಯಸಾಕ್ಷಿ ಸುದ್ದಿ,

ಪ್ರಯಾಗ್‌ರಾಜ್‌ನಲ್ಲಿ ವಕೀಲ, ಪ್ರಾಧ್ಯಾಪಕ ಮತ್ತು ಇತರ ಮೂವರ ಮನೆಗಳನ್ನು ಕೆಡವಿದ ಉತ್ತರ ಪ್ರದೇಶ ಸರ್ಕಾರವನ್ನು ಸುಪ್ರೀಂ ಕೋರ್ಟ್ ಬುಧವಾರ (ಮಾ.6) ತೀವ್ರ ತರಾಟೆಗೆ ತೆಗೆದುಕೊಂಡಿದೆ.

ನ್ಯಾಯಮೂರ್ತಿಗಳಾದ ಅಭಯ್ ಎಸ್. ಓಕಾ ಮತ್ತು ಎನ್. ಕೋಟಿಶ್ವರ್ ಸಿಂಗ್ ಅವರಿದ್ದ ಪೀಠ ಸರ್ಕಾರದ ಕ್ರಮಕ್ಕೆ ಅಸಮ್ಮತಿ ವ್ಯಕ್ತಪಡಿಸಿದ್ದು, ಇಂತಹ ಕ್ರಮಗಳು 'ಆಘಾತಕಾರಿ ಮತ್ತು ತಪ್ಪು ಸಂದೇಶವ'ನ್ನು ರವಾನಿಸುತ್ತವೆ ಎಂದು ಹೇಳಿದ್ದಾರೆ.

"ಸಂವಿಧಾನದ ವಿಧಿ 21 ಎಂದು ಕರೆಯಲ್ಪಡುವ ಒಂದು ವಿಷಯವಿದೆ" ಎಂದು ನ್ಯಾಯಮೂರ್ತಿ ಓಕಾ ಕಠುವಾಗಿ ಹೇಳಿದ್ದಾರೆ.

ಧ್ವಂಸ ಕಾರ್ಯಾಚರಣೆಗೆ ಮುನ್ನ ಅನುಸರಿಸಬೇಕಾದ ಕಾರ್ಯವಿಧಾನವನ್ನು ನಿಗದಿಪಡಿಸಿದ ಸುಪ್ರೀಂ ಕೋರ್ಟ್‌ನ ಇತ್ತೀಚಿನ ತೀರ್ಪನ್ನು ನ್ಯಾಯಮೂರ್ತಿ ಓಕಾ ಅವರು ಉಲ್ಲೇಖಿಸಿದ್ದು, "ನಿಮ್ಮ ಬುಲ್ಡೋಝರ್ ನ್ಯಾಯಕ್ಕೆ ಸಂಬಂಧಿಸಿದಂತೆ ಇತ್ತೀಚೆಗೆ ಸಮನ್ವಯ ಪೀಠ ತೀರ್ಪು ನೀಡಿದೆ" ಎಂದಿದ್ದಾರೆ.

ರಾಜ್ಯ ಸರ್ಕಾರವನ್ನು ತೀವ್ರವಾಗಿ ತರಾಟೆಗೆ ತೆ–ಗೆದುಕೊಂಡ ನ್ಯಾಯಮೂರ್ತಿ ಓಕಾ ಅವರು, "ಕೆಡವಲಾದ ಕಟ್ಟಡಗಳನ್ನು ನಿಮ್ಮದೇ ಖರ್ಚಿನಲ್ಲಿ ಮರು ನಿರ್ಮಿಸಲು ಸರ್ಕಾರಕ್ಕೆ ಆದೇಶಿಸುತ್ತೇವೆ.

## ಸ್ನೇಹ ಸಮ್ಮೇಳನ, ವಿಜ್ಞಾನ ವಸ್ತು ಪ್ರದರ್ಶನ

■ ವಿಜಯಸಾಕ್ಷಿ ಸುದ್ದಿ, ಹುಲಕೋಟಿ

ಇಲ್ಲಿನ ಸರಕಾರಿ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ಹಮ್ಮಿಕೊಂಡಿದ್ದ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ವಿಜ್ಞಾನ ವಸ್ತು ಪ್ರದರ್ಶನವನ್ನು ತಾ.ಪಂ ಮಾಜಿ ಸದಸ್ಯರಾದ ವಿಜಯಲಕ್ಷ್ಮೀ ತಮ್ಮನಗೌಡ್ರ ಉದ್ಘಾಟಿಸಿದರು.

ಎ.ವಿ. ತಳವಾರ್ ಗುರುಗಳು ಸ್ವಾಗತ ಭಾಷಣ ಮಾಡಿದರು. ಶಾಲೆಯ ಪ್ರಧಾನ ಗುರುಗಳಾದ ಎಸ್.




ಆಯ್. ಬಡಿಗೇರ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಸ್. ಆರ್. ಬಂಡಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ವಿಜಯಲಕ್ಷ್ಮೀ ತಮ್ಮನಗೌಡ್ರ, ಪಾಲಕರು ಮತ್ತು ಶಿಕ್ಷಕರು ಸಮಾಜಮುಖಿಯಾಗಿ ಕೆಲಸ ಮಾಡಿ ಪ್ರತಿಯೊಬ್ಬ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಲು ಮುಂದಾಗಬೇಕು ಎಂದರು.

ಶಿಕ್ಷಣ ಇಲಾಖೆಯ ನಿವೃತ್ತ ಉಪ ನಿರ್ದೇಶಕ ಎಂ.ಎ. ರಡ್ಡೇರ, ಬಿಇಓ ವಿ.ವಿ. ನಡುವಿನಮನಿ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಶಂಕರ್ ಹಡಗಲಿ ಭಾಗವಹಿಸಿದ್ದರು. ಆರ್.ಕೆ. ಗುತ್ತಿ ಕಾರ್ಯಕ್ರಮ ನಿರೂಪಿಸಿದರು. ಆರ್.ವೈ. ಹನುಮರ ವಂದಿಸಿದರು.

# ಪ್ರತಿಭೆ, ಕೊಡುಗೆಗಳ ಆಧಾರದಲ್ಲಿ ಸಮಾಜ ನಿರ್ಮಿಸಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಲಿಂಗ, ಜಾತಿ ಅಥವಾ ಧರ್ಮದ ಆಧಾರದ ಮೇಲೆ ಯಾರೂ ತಾರತಮ್ಯ ಅನುಭವಿಸದ ಸಮಾಜವನ್ನು ರಚಿಸುವ ಅಗತ್ಯವಿದೆ ಎಂದು ಕೇಂದ್ರ ಸಾರಿಗೆ ಸಚಿವ ನಿತಿನ್ ಗಡ್ಕರಿ ಗುರುವಾರ ಹೇಳಿದ್ದಾರೆ.

ಮಾರ್ಚ್ 8 ರಂದು ಆಚರಿಸಲಾಗುವ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಗೆ ಮುಂಚಿತವಾಗಿ, ಮಹಿಳಾ ಬದಲಾವಣೆ ತರುವವರಿಗೆ 'ಲೋಕಮಾತಾ ಅಹಲ್ಯಾಬಾಯಿ ಹೋಳ್ಕರ್ ಮಹಿಳಾ ಸಮ್ಮಾನ್' ಅನ್ನು ವಿತರಿಸುವ ಸಮಾರಂಭದಲ್ಲಿ ಗಡ್ಕರಿ ಈ ಹೇಳಿಕೆಗಳನ್ನು ನೀಡಿದರು.

"ಜಾತಿ, ಲಿಂಗ, ಧರ್ಮ ಅಥವಾ ಸಾಮಾಜಿಕ ಸ್ಥಾನಮಾನದ ಆಧಾರದ ಮೇಲೆ ಯಾರನ್ನೂ ನಿರ್ಣಯಿಸದೆ, ಅವರ ಪ್ರತಿಭೆ ಮತ್ತು ಕೊಡುಗೆಗಳ ಆಧಾರದ ಮೇಲೆ ನಿರ್ಣಯಿಸಲ್ಪಡುವ ಸಮಾಜವನ್ನು ನಾವು ನಿರ್ಮಿಸಬೇಕು" ಎಂದು ಗಡ್ಕರಿ ಹೇಳಿದರು.

"ಜಗತ್ತು ಈಗ ಬದಲಾಗಿದೆ, ಮಹಿಳೆಯರು ತಮ್ಮ ಲಿಂಗದಿಂದ ಸೀಮಿತವಾಗಿರಬಾರದು. ಅರ್ಹತೆ ಇರುವಲ್ಲಿ, ಮಹಿಳೆಯರು ಮುಂಚೂಣಿಯಲ್ಲಿದ್ದಾರೆ, ಉನ್ನತ ಸಾಧಕರಲ್ಲಿ ಶೇಕಡಾ 75 ರಷ್ಟು ಮಹಿಳೆಯರು" ಎಂದು ಗಡ್ಕರಿ ಹೇಳಿದರು.

ಕೇಂದ್ರ ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್ ಖಟ್ಟರ್ ಅವರು ಮಹಿಳಾ ಸಬಲೀಕರಣ ಮತ್ತು ಈ ನಿಟ್ಟಿನಲ್ಲಿ ಹರಿಯಾಣ ಹಲವು ವರ್ಷಗಳಿಂದ ಸಾಧಿಸಿರುವ ಪ್ರಗತಿಯ ಬಗ್ಗೆ ಮಾತನಾಡಿದರು.

ಹರಿಯಾಣ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ, ಮಹಿಳೆಯರ ಬಗ್ಗೆ ರಾಜ್ಯದಲ್ಲಿ ಆಳವಾಗಿ ಬೇರೂರಿದ್ದ ನಿಷೇಧಗಳನ್ನು ತಾವು ಕಂಡಿದ್ದಾಗಿ ಅವರು ನೆನಪಿಸಿಕೊಂಡರು.


## ಉತ್ತರಾಭಿಮುಖಿ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದ ಲೋಕಾರ್ಪಣೆ ಕಾರ್ಯಕ್ರಮ ಮಾ.7ರಿಂದ

# ಶ್ರೀ ಆಂಜನೇಯ ಸ್ವಾಮಿಗೆ ನೂತನ ಮಂದಿರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಬಾಲೆಹೊಸೂರ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡ ಉತ್ತರಾಭಿಮುಖಿ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದ ಲೋಕಾರ್ಪಣೆ, ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಹಾಗೂ ಕಳಸಾರೋಣ ನಿಮಿತ್ತ ಮಾ.7ರಿಂದ 9ರವರೆಗೆ ವಿವಿಧ ಧಾರ್ಮಿಕ, ಸಾಂಸ್ಕೃತಿಕ ಹಾಗೂ ಧರ್ಮಸಭೆ ಕಾರ್ಯಕ್ರಮಗಳು ಬಾಲೆಹೊಸೂರು/ ಶಿರಹಟ್ಟಿಯ ಫಕ್ಕೀರೇಶ್ವರ ಸಂಸ್ಥಾನ ಮಠದ ಶ್ರೀ ಫಕೀರ ದಿಂಗಾಲೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ನೆರವೇರಲಿವೆ ಎಂದು ದೇವಸ್ಥಾನ ಜೀರ್ಣೋದ್ಧಾರ ಕಮಿಟಿ ಅಧ್ಯಕ್ಷರಾದ ಗೋಪಾಲರಾವ್ ಕುಬೇರ ತಿಳಿಸಿದರು.

ಅವರು ಈ ಕುರಿತು ಗುರುವಾರ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಐಹಾಸಿಕ ಹಿನ್ನೆಲೆಯುಳ್ಳ ಗ್ರಾಮದ ಶ್ರೀ ಆಂಜನೇಯಸ್ವಾಮಿ ದೇವಸ್ಥಾನ ಮೊದಲು ಕಟ್ಟಿಗೆ ಮಡಿಗೆ ಹೊಂದಿ ಶಿಥಿಲಾವಸ್ಥೆ ತಲುಪಿತ್ತು. ಭಕ್ತರೆಲ್ಲರ ಒಮ್ಮತದ ನಿರ್ಧಾರದಿಂದ 4 ವರ್ಷಗಳ ಹಿಂದೆ ದೇವಸ್ಥಾನ ಜೀರ್ಣೋದ್ಧಾರಕ್ಕೆ ನಿರ್ಣಯಿಸಿ ಗ್ರಾಮದ ಭಕ್ತರೆಲ್ಲ ಸ್ವಯಂ ಪ್ರೇರಣೆಯಿಂದ ಪಾಲ್ಗೊಂಡು ಹಳೆಯ ದೇವಸ್ಥಾನ ತೆರವುಗೊಳಿಸಿದರು. ಪ್ರಾರಂಭದಲ್ಲಿ 10 ಲಕ್ಷ ರೂ ವೆಚ್ಚದಲ್ಲಿ ದೇವಸ್ಥಾನ ನಿರ್ಮಾಣ ಮಾಡಬೇಕೆಂದುಕೊಳ್ಳಲಾಗಿತ್ತು. ಆದರೆ ಆಂಜನೇಯ ಸ್ವಾಮಿಯ ಶಕ್ತಿಯೆಂಬಂತೆ ಭಕ್ತರೆಲ್ಲ ಧನ



ಸಹಾಯ/ದೇಣಿಗೆ ಸಲ್ಲಿಸಿದ್ದರಿಂದ 90 ಲಕ್ಷ ರೂ ವೆಚ್ಚದಲ್ಲಿ ಕಜ್ಜರಿ ಕಲ್ಲಿನಿಂದ ಸುಂದರ ದೇವಸ್ಥಾನ ನಿರ್ಮಾಣಗೊಂಡು ಲೋಕಾರ್ಪಣೆಗೆ ಅಣಿಯಾಗಿದೆ ಎಂದು ಮಾಹಿತಿ ನೀಡಿದರು.

ದೇವಸ್ಥಾನ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸಿದ ಹಿರಿಯರಾದ ರಾಮಣ್ಣ ಹಾವನೂರ, ಎಸ್.ಜಿ. ಮಾದಾಪುರ ಮಾಹಿತಿ ನೀಡಿ, ಕ್ರಿ.ಶ 5ನೇ ಶತಮಾನದ ಶಾತವಾಹನ ಕಾಲದಲ್ಲಿ ಆಡಳಿತಕ್ಕೊಳಪಟ್ಟ ದೇವಸ್ಥಾನ ಇದಾಗಿದೆಯಂತೆ. ನಂತರ ಹಾವನೂರ ದಳವಾಯಿ, ಸವಣೂರ ನವಾಬರ ಕಾಲದಲ್ಲಿ ದೇವಸ್ಥಾನದ ಸುತ್ತಲೂ ಇರುವ ಕೋಟೆ(ಹುಡೇವು) ಬಾವಿ ನಿರ್ಮಾಣಗೊಂಡಿವೆ. 7 ಊರು ಕೂಡಿ ಬಾಲೆಹೊಸೂರ ಆಗಿದೆ. ಓರ್ವ ಕೆರಗೊಂಡ ಮನೆತನದ ಹುಡುಗನ ಕನಸಿನಲ್ಲಿ ಬಂದು ಹುಡುಗ ಆಕಳು ಮೇಯಿಸಲು ಹೋದಾಗ ಅವನ ಸಿಕ್ಕ ಆಂಜನೇಯ ಮೂರ್ತಿಯನ್ನು ತಂದು ಉತ್ತರಾಭಿಮುಖವಾಗಿ ಪ್ರತಿಷ್ಠಾಪಿಸಿದ್ದಾನೆ ಎನ್ನಲಾಗುತ್ತದೆ.

ದೇವಸ್ಥಾನ ಜೀರ್ಣೋದ್ಧಾರ ಸಮಯದಲ್ಲಿ ಈ ನೆಲದಲ್ಲಿ ದೇವರ ಶಿಲಾಮೂರ್ತಿಗಳು ಲಭಿಸಿವೆ. ಒಟ್ಟು 3 ಎಕರೆಗಿಂತಲೂ ಹೆಚ್ಚು ವಿಸ್ತೀರ್ಣದ ಈ ದೇವಸ್ಥಾನಕ್ಕೆ ಐತಿಹಾಸಿಕ ಹಿನ್ನೆಲೆಯಿದೆ. ಮೂಲ ಮೂರ್ತಿಗೆ ಯಾವುದೇ ಧಕ್ಕೆ ಬರದಂತೆ ನೂತನ ದೇವಸ್ಥಾನ ನಿರ್ಮಿಸಲಾಗಿದೆ. ಅತ್ಯಂತ ಜಾಗೃತ ದೇವರಾದ ಶ್ರೀ ಆಂಜನೇಯ ಸ್ವಾಮಿಗೆ ಗ್ರಾಮದ ಸರ್ವ ಜಾತಿ-ಜನಾಂಗದವರ ಆರಾಧ್ಯ ದೈವವಾಗಿದೆ. ಭಕ್ತರ ಇಷ್ಟಾರ್ಥ ಸಿದ್ಧಿಸುವ ದೇವಸ್ಥಾನ ಅಪಾರ ಭಕ್ತ ಸಮೂಹ ಹೊಂದಿದೆ. ಪ್ರಾಚೀನ ಇತಿಹಾಸ, ಹಿನ್ನೆಲೆ ಹೊಂದಿರುವ ದೇವಸ್ಥಾನದ ಸರ್ವತೋಮುಖ ಅಭಿವೃದ್ಧಿಗೆ ಸರ್ಕಾರ ಮತ್ತು ಜಿಲ್ಲೆಯವರೇ ಆದ ಪ್ರವಾಸೋದ್ಯಮ ಇಲಾಖೆ ಸಚಿವರು ಆದ್ಯತೆ ನೀಡಬೇಕು ಎಂದರು.

ಲಕ್ಷ್ಮೇಶ್ವರದ ಹಾಲುಮತ ಸಮಾಜದವರು 45 ಕೆಜಿ ತೂಕದ ಕಂಚಿನ ಕಳಸ, ಹಳೆಯ ವಿದ್ಯಾರ್ಥಿಗಳು 1 ಕೆಜಿ ಬೆಳ್ಳಿ ಪ್ರಭಾವಳಿ ಕಾಣಿಕೆ ಸಲ್ಲಿಸಿದ್ದಾರೆ. ದೇವಸ್ಥಾನದ ಹುಂಡಿಯಲ್ಲಿ 11 ಲಕ್ಷ ರೂ ಸಂಗ್ರಹವಾಗಿತ್ತು. ಗ್ರಾಮದ ಭಕ್ತರೆಲ್ಲ ಸೇರಿ 35 ಲಕ್ಷ ರೂ ಸಂಗ್ರಹಿಸಿದ್ದಾರೆ. ಧರ್ಮಸ್ಥಳ ಸಂಘ, 2 ಲಕ್ಷ ರೂ ಸರ್ಕಾರದ ಅನುದಾನ, ದಾನಿಗಳ ಸಹಾಯ ಸೇರಿ ಒಟ್ಟು 90 ಲಕ್ಷ ರೂ ವೆಚ್ಚದಲ್ಲಿ ದೇವಸ್ಥಾನ ಲೋಕಾರ್ಪಣೆಗೊಳ್ಳುತ್ತಿರುವುದು ಸಂತಸ ತಂದಿದೆ. ಅಲ್ಲದೇ ಗ್ರಾಮದ ಯುವಕರೇ ಲಕ್ಷ ರೂ ಖರ್ಚು ಮಾಡಿ ದೇವಸ್ಥಾನದ ಪ್ರಾಂಗಣದಲ್ಲಿ ರಾಮ-ಲಕ್ಷ್ಮಣ-ಸೀತಾದೇವಿಯ ಸುಂದರ ಮಂಟಪ ನಿರ್ಮಿಸಿದ್ದಾರೆ ಎಂದು ಗೋಪಾಲರಾವ್ ಕುಬೇರ ತಿಳಿಸಿದರು.

ಈ ವೇಳೆ ಚನ್ನಮ್ಮ ಕೆಂಚಪ್ಪ ಮೈಲಾರಿ, ಶಿವಣ್ಣ ಕಬ್ಬೇರ, ಸೋಮಯ್ಯ ಚನ್ನಾಪುರಮಠ, ಬಸವರೆಡ್ಡಿ ಹನಮರೆಡ್ಡಿ, ಯಲ್ಲಪ್ಪ ಸೂರಣಗಿ, ನಿಂಗಪ್ಪ ಮಡಿವಾಳರ, ಬಸವರಾಜ ನೀಲಣ್ಣವರ, ಅಶೋಕ ಮಾಗಿ, ಸಿದ್ದಲಿಂಸ್ವಾಮಿ ಪಶುಪತಿಮಠ, ಸುರೇಶ ಹಾವನೂರ, ರಾಜು ಬೆಂಚಳ್ಳಿ ಸೇರಿ ಅನೇಕರಿದ್ದರು.

# ಸಾಧಕರಿಗೆ ಪ್ರಶಸ್ತಿ ಪ್ರದಾನ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಡಾ. ವಿ.ಬಿ. ಹಿರೇಮಠ ಮೆಮೋರಿಯಲ್ ಪ್ರತಿಷ್ಠಾನ ಹಾಗೂ ಅಶ್ವಿನಿ ಪ್ರಕಾಶನ ಗದಗ ಇವರ ನೇತೃತ್ವದಲ್ಲಿ ನಡೆದ ಗಾನಯೋಗಿ ಶ್ರೀ ಪುಟ್ಟರಾಜ ಗವಾಯಿಗಳ 111ನೇ ಜಯಂತ್ಯುತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಶ್ರೀ ಪರಮ ಪೂಜ್ಯ ಮೌನ ತಪಸ್ವಿಗಳಾದ ಶ್ರೀ ವೀರೇಶ್ವರ ಶಿವಯೋಗಿಗಳು ಅನ್ನದಾನೇಶ್ವರ ಸಂಸ್ಥಾನ ಮಠ ನರಸಾಪುರ ಗದಗ ಇವರಿಗೆ ಗ್ರಂಥ ತುಲಾಭಾರ, ರಾಜ್ಯದ ವಿವಿದ ಸಾಧಕರಿಗೆ ಪ್ರಶಸ್ತಿ ಪ್ರದಾನ ಹಾಗೂ ಕವಿಗೋಷ್ಠಿ ಕಾರ್ಯಕ್ರಮವು ಯಶಸ್ವಿಯಾಗಿ ನೆರವೇರಿತು.

ಡಾ. ವಿ.ವಿ. ಹಿರೇಮಠ ಅವರ ನಿವಾಸದ ಸಭಾ ಭವನದಲ್ಲಿ ಶಿಗ್ಗಾಂವಿ ತಾಲೂಕಿನ ಕುನ್ನೂರ




ಪ್ಲಾಟ ಕಿರಿಯ ಪ್ರಾಥಮಿಕ ಶಾಲೆಯ ಸಹಶಿಕ್ಷಕಿ ಗಾಯತ್ರಿ ಎಲ್.ರಾಠೋಡ್ ಅವರಿಗೆ 'ಶ್ರೀ ಪುಟ್ಟರಾಜ ಗವಾಯಿಗಳ ಸದ್ಭಾವನಾ ಪ್ರಶಸ್ತಿ' ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ನಾಡಿನ ಹೆಸರಾಂತ ಕವಿಗಳು, ಸಾಹಿತ್ಯಕಾರರು, ಸಾಮಾಜಿಕ ಚಿಂತಕರು, ನಾಡಿನ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಹಲವು ಸಾಧಕರಿಗೆ ಸನ್ಮಾನದೊಂದಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು ಎಂದು ಪ್ರತಿಷ್ಠಾನದ ಕಾರ್ಯದರ್ಶಿ ಪುಟ್ಟರಾಜ ವ್ಹಿ.ಹಿರೇಮಠ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳು ಭಯಪಡದೇ ಪರೀಕ್ಷೆ ಎದುರಿಸಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಎಸ್ಸೆಸ್ಸೆಲ್ಸಿ ಪರೀಕ್ಷೆಯನ್ನು ಭಯ ಪಡದೇ ಎದುರಿಸಿ ಎಂದು ಡಯಟ್ ಉಪನ್ಯಾಸಕಿ ಕೆ.ಎಸ್. ಹೂಲಗೇರಿ ಹೇಳಿದರು.

ಅವರು ಪಟ್ಟಣದ ಸರಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ) ಶಾಲೆಯ ಮಾಹಾಸರಸ್ವತಿ ಪೂಜೆ ಹಾಗೂ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿ, ಎಸ್ಸೆಸ್ಸೆಲ್ಸಿ ಪರೀಕ್ಷೆ ಒಂದು ಮಹತ್ವದ ಘಟ್ಟವಾಗಿದ್ದು, ಮಕ್ಕಳ ಭವಿಷ್ಯಕ್ಕೆ ಭದ್ರ ಬುನಾದಿಯಾಗಿದೆ. ಮಕ್ಕಳು ಸಮಯಕ್ಕೆ ಮಹತ್ವ ನೀಡಿ ಸತತ ಅಭ್ಯಾಸಲ್ಲಿ ತೊಡಗುವುದರಿಂದ ಉತ್ತಮ ಫಲಿತಾಂಶ ಪಡೆದುಕೊಳ್ಳಲು




ಸಹಕಾರಿಯಾಗುತ್ತದೆ. ಮಕ್ಕಳು ಪರೀಕ್ಷೆಯ ಬಗ್ಗೆ ಭಯ ಪಡದೇ ಪರೀಕ್ಷೆ ಎದುರಿಸುವುದರಿಂದ ಉತ್ತಮ ಅಂಕ ಪಡೆಯಲು ಸಾಧ್ಯವಾಗುತ್ತದೆ ಎಂದರು.

ನೂರಅಹ್ಮದ ನದಾಫ್ ಮಾತನಾಡಿ, ಸರಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ) ಶಾಲೆಯಲ್ಲಿ ನುರಿತ ಶಿಕ್ಷಕ ವೃಂದ, ಕಂಪ್ಯೂಟರ್ ಶಿಕ್ಷಣ, ಕ್ರೀಡಾ ಮೈದಾನ, ದೈಹಿಕ ಶಿಕ್ಷಕರು, ಚಿತ್ರಕಲೆ ಶಿಕ್ಷಕರು ಹಾಗೂ ವಿಷಯವಾರು ಶಿಕ್ಷಕರ ವೃಂದವನ್ನು ಹೊಂದಿದ್ದು, ಸರಕಾರಿ ಶಾಲೆಗಳಲ್ಲಿ ನುರಿತ ಶಿಕ್ಷಕರು ಹಾಗೂ ಸರಕಾರದ ಎಲ್ಲಾ ಸೌಲಭ್ಯಗಳು ಮಕ್ಕಳಿಗೆ ದೊರೆಯುತ್ತಿವೆ ಎಂದರು.

ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ಮಾಹಾದೇವಪ್ಪ ಮಾನೇಗಾರ, ಪ.ಪಂ ಸದಸ್ಯೆ ನೀಲಮ್ಮಾ ಅಸುಂಡಿ, ಉಪಾಧ್ಯಕ್ಷೆ ಶಕುಂತಲಾ ಕಮ್ಮಾರ, ದಾವಲಸಾಬ ಯಳವತ್ತಿ, ಶಾಲಾ ಪ್ರಧಾನ ಗುರು ಎಸ್.ಎಚ್. ಪೂಜಾರ, ಎಲ್.ಡಿ. ರಾಠೋಡ, ಎಸ್.ವಿ. ತಿಮ್ಮಾಪೂರ, ಜಿ.ಆರ್. ಕುಂದರಗಿ, ಜಿ.ಐ. ಪಾಟೀಲ್, ನೂರಹ್ಮದ ನದಾಫ್, ವಿ.ಟಿ. ಅಂಗಡಿ, ಹಂಪನಗೌಡ ನಾಯಕ್, ಬಸವರಾಜ ಗೌರಿಮನಿ, ಜಿ.ಎಂ. ಪಿರಂಗಿ, ಮಾಹಾಂತೇಶ ಕಣವಿ, ಮಾಹಾಂತೇಶ ಕೆಂಚನಾಯ್ಕರ್ ಧರ್ಮಸ್ಥಳ ಸಂಘದ ಮೇಲ್ವಿಚಾರಕಿ ಶಾಂತಾ, ಶೈಲಾ ಬಳ್ಳಾರಿ ಇದ್ದರು.

## ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದಿಂದ ಕಾರ್ಯಕ್ರಮ

# ಮಹಿಳಾ ದಿನಾಚರಣೆ ಸಮಾರಂಭ ಮಾ.8ಕ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದಿಂದ ಮಾ.8ರಂದು ಹರಿಹರ ಪಂಚಮಸಾಲಿ ಪೀಠದ ಜಗದ್ಗುರು ಶ್ರೀ ವಚನಾನಂದ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪಂಚಮಸಾಲಿ ಸಮಾಜದ ಅಧ್ಯಕ್ಷ ಮಂಜುನಾಥ ಮಾಗಡಿ ಹೇಳಿದರು.

ಅವರು ಬುಧವಾರ ಈ ಕುರಿತು ಕರೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಪ್ರತಿವರ್ಷ ಪಂಚಮಸಾಲಿ ಸಮಾಜದ ತಾಲೂಕಾ ಘಟಕದಿಂದ ಮಹಿಳಾ ದಿನಾಚರಣೆಯನ್ನು ವಿಶೇಷವಾಗಿ



ಆಚರಿಸಲಾಗುತ್ತಿದೆ. ಈ ವರ್ಷವೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ಆಚರಿಸಲಾಗುವುದು. ಸೂಪರ್ ಸಂಸಾರ, ರಂಗೋಲಿ ಸ್ಪರ್ಧೆ ಹಾಗೂ ಮಹಿಳಾ ಸಾಧಕರಿಗೆ ಸನ್ಮಾನ, ಉಪನ್ಯಾಸ ಕಾರ್ಯಕ್ರಮಗಳನ್ನು ನಡೆಸಲಾಗುತ್ತದೆ. ಈ ಕಾರ್ಯಕ್ರಮ ಕೇವಲ ಪಂಚಮಸಾಲಿ ಸಮಾಜಕ್ಕೆ ಮಾತ್ರ ಸೀಮೀತವಾಗಿರದೇ ಎಲ್ಲ ಜಾತಿ, ಜನಾಂಗ, ರೈತರು, ನೌಕರ ವರ್ಗ ಎಲ್ಲರೂ ಪಾಲ್ಗೊಳ್ಳಬಹುದಾಗಿದೆ. ಈಗಾಗಲೇ ಸೂಪರ್ ಸಂಸಾರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು 70ಕ್ಕೂ ಹೆಚ್ಚು ಕುಟುಂಬಗಳು, ರಂಗೋಲಿ ಸ್ಪರ್ಧೆಗೆ 80ಕ್ಕೂ ಹೆಚ್ಚು ಮಹಿಳೆಯರು ಹೆಸರು ನೋಂದಾಯಿಸಿಕೊಂಡಿದ್ದಾರೆ ಎಂದರು.

ಚನ್ನಮ್ಮ ಬಸವರಾಜ ಬೊಮ್ಮಾಯಿ ಕಾರ್ಯಕ್ರಮ ಉದ್ಘಾಟಿಸುವರು. ಪಂಚಮಸಾಲಿ ಸಂಘದ ರಾಜ್ಯಾಧ್ಯಕ್ಷೆ ವಸಂತಾ ಹುಲ್ಲತ್ತಿ ಪ್ರಶಸ್ತಿ ಪ್ರದಾನ ಮಾಡುವರು. ಸ.ಕೈ.ತ ಸಂಸ್ಥೆ ಕಿರಿಯ ಅಧಿಕಾರಿ ಸುನೀತಾ ಆರ್.ಬುರಡಿ ಉಪನ್ಯಾಸ ನೀಡುವರು. ಅಧ್ಯಕ್ಷತೆಯನ್ನು ಸುನೀತಾ ಮಂಜುನಾಥ ಮಾಗಡಿ ವಹಿಸಲಿದ್ದಾರೆ. ಪಂಚಮಸಾಲಿ ಸಂಘದ ರಾಜ್ಯ ಪ್ರ. ಕಾರ್ಯದರ್ಶಿ ಡಾ. ಶೋಭಾ ನಿಸ್ಸೀಮಗೌಡರ, ರಾಜ್ಯ ಉಪಾಧ್ಯಕ್ಷೆ ಮಾಲಾದೇವಿ ದಂದರಗಿ, ತಾಲೂಕಾ ಮಹಿಳಾ ಘಟಕದ ಅಧ್ಯಕ್ಷೆ ಶಾರದಾ ಮಹಾಂತಶೆಟ್ಟರ, ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ, ಮಾಜಿ ಅಧ್ಯಕ್ಷೆ ಜಯಮ್ಮ ಅಂದಲಗಿ, ಸೇರಿ ಅನೇಕರು ಆಗಮಿಸುವರು. ಈ ವೇಳೆ ಹಿರಿಯ ಸಾಹಿತಿ, ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಲಲಿತಾ ಸಿ.ಕೆರಿಮನಿ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದರು.

ಸಂಘದ ತಾಲೂಕಾ ಪದಾಧಿಕಾರಿ ಚಂದ್ರು ಮಾಗಡಿ ಕಾರ್ಯಕ್ರಮದ ರೂಪರೇಷೆಗಳನ್ನು ವಿವರಿಸಿದರು. ಸಮಾಜದ ಹಿರಿಯರಾದ ಶಿವನಗೌಡ ಅಡರಕಟ್ಟಿ, ಅಶೋಕ ನೀರಾಲೋಟಿ, ನಾಗಪ್ಪ ಉಮಚಗಿ, ಬಸವರಾಜ ಉಮಚಗಿ, ಈರಣ್ಣ ಕಟಗಿ, ದ್ಯಾಮಣ್ಣ ಕಮತದ, ಮಂಜು ಮುಳಗುಂದ, ಮಲ್ಲಪ್ಪ ಉಮಚಗಿ, ರಾಜು ಲಿಂಬಿಕಾಯಿ, ಪವನ ಬಡಿಗೇರ ಇತರರಿದ್ದರು.

# ವೇರ್ಣೆಕರ್ ದಂಪತಿಗಳ ಗುಣ ಇತರರಿಗೆ ಮಾದರಿ

■ವಿಜಯಸಾಕ್ಷಿ ಸುದ್ದಿ, ಗದಗ

ಯುವ ಉದ್ಯಮಿ ಸುನೀಲ್ ವೇರ್ಣೆಕರ್ ದಂಪತಿಗಳ ಪರೋಪಕಾರ ಗುಣ ಪ್ರತಿಯೊಬ್ಬರಿಗೂ ಮಾದರಿಯಾಗಿದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ಸುನಿಲ್ ವರ್ಣೇಕರ್ ದಂಪತಿಗಳಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಹೊರಟ್ಟಿ, ಯುವ ಉದ್ಯಮಿಯಾಗಿ ಕೇವಲ ಲಾಭಕ್ಕಾಗಿ ಉದ್ಯೋಗ ಮಾಡದೆ ಅದರಲ್ಲಿ ಬಂದ ಕೆಲ ಲಾಭಾಂಶವನ್ನು ದಾನ-ಧರ್ಮ ಮಾಡುವ ಮೂಲಕ ಸಮಾಜದ ಋಣ ತೀರಿಸುತ್ತಿದ್ದಾರೆ. ನಾನು ದತ್ತು ಪಡೆದ ಸಿದ್ದಲಿಂಗ ನಗರದ ಸರ್ಕಾರಿ ಪ್ರೌಢಶಾಲೆಗೆ ಲಕ್ಷಾಂತರ ಹಣ ಖರ್ಚು ಮಾಡಿ ದ್ವಾರಬಾಗಿಲನ್ನ ನಿರ್ಮಿಸಿಕೊಟ್ಟಿದ್ದಾರೆ. ಸರ್ಕಾರಿ ಶಾಲೆಗಳಿಗೆ ಇಂತಹ ಸೌಲಭ್ಯ ಇರುವುದು ವಿರಳ. ಅಲ್ಲದೆ ಶಾಲೆಗೆ ಬೇಕಾದ ಪರಿಕರಗಳನ್ನೂ ಒದಗಿಸಿದ್ದಾರೆ. ಹೀಗಾಗಿ ದಂಪತಿಗಳನ್ನು



ಅಭಿನಂದಿಸುತ್ತೇನೆ ಎಂದರು.

ಸುನಿಲ್ ವೇರ್ಣೆಕರ್ ಮಾತನಾಡಿ, ನಾಡು ಕಂಡ ಅಪರೂಪದ ಜನನಾಯಕ ಪರಿಷತ್ತಿನಲ್ಲಿ ಐತಿಹಾಸಿಕ ದಾಖಲೆ ಮಾಡಿದ ಸಭಾಪತಿ ಬಸವರಾಜ್ ಹೊರಟ್ಟಿ ದಂಪತಿಗಳನ್ನು ಗೌರವಿಸುವ ಭಾಗ್ಯ ಸಿಕ್ಕಿದ್ದು ನಮ್ಮ ಕುಟುಂಬದ ಪುಣ್ಯ. ಇವರ ಆಶೀರ್ವಾದ, ಮಾರ್ಗದರ್ಶನ, ಸಹಕಾರ ನನಗೆ ಹಾಗೂ ನನ್ನ ಕುಟುಂಬದ ಮೇಲೆ ಸದಾ ಇರಲಿ ಎಂದು ಆಶಿಸಿದರು.

ಈ ಸಂದರ್ಭದಲ್ಲಿ ಡಾ. ಬಸವರಾಜ ಧಾರವಾಡ, ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಎಂ. ಅಗಡಿ, ಪ್ರಭಾಕರ್ ವೇರ್ಣೆಕರ್, ಪ್ರಿಯಾ ವೇರ್ಣೆಕರ್, ಕುಮಾರ್ ಕಾರ್ತಿಕ್ ಸೇರಿದಂತೆ ದೈವಜ್ಞ ಸಮಾಜದ ಗುರು-ಹಿರಿಯರು ಉಪಸ್ಥಿತರಿದ್ದರು.

# ಸುದ್ದಿ ಮೇಲ್ವಿಚಾರಣೆಗೆ ಮಾಧ್ಯಮ ಕೇಂದ್ರ ಸ್ಥಾಪನೆ

■ವಿಜಯಸಾಕ್ಷಿ ಸುದ್ದಿ, ಮಹಾರಾಷ್ಟ್ರ

ಮುದ್ರಣ, ಎಲೆಕ್ಟ್ರಾನಿಕ್ ಮತ್ತು ಡಿಜಿಟಲ್ ಮಾಧ್ಯಮಗಳ ಸುದ್ದಿ ವಿಷಯವನ್ನು ವಿಶ್ಲೇಷಿಸಲು ಮಹಾರಾಷ್ಟ್ರ ಸರ್ಕಾರ ಮಾಧ್ಯಮ ಮೇಲ್ವಿಚಾರಣಾ ಕೇಂದ್ರವನ್ನು ಸ್ಥಾಪಿಸಲಿದೆ; ಈ ಉದ್ದೇಶಕ್ಕಾಗಿ 10 ಕೋಟಿಗಳ ಬಜೆಟ್ ಅನ್ನು ನಿಗದಿಪಡಿಸಿದೆ.

ಬುಧವಾರ ಪ್ರಕಟವಾದ ಸರ್ಕಾರಿ ನಿರ್ಣಯದ (ಜಿಆರ್) ಪ್ರಕಾರ, ಕೇಂದ್ರವು ಮುದ್ರಣ ಮತ್ತು ಪ್ರಸಾರ ಮಾಧ್ಯಮಗಳಲ್ಲಿನ ಎಲ್ಲ ದಾರಿತಪ್ಪಿಸುವ ಸುದ್ದಿ ವರದಿಗಳನ್ನು ಸಂಗ್ರಹಿಸಿ ವಿಶ್ಲೇಷಿಸುತ್ತದೆ. ಈ ಬಗ್ಗೆ ವಾಸ್ತವಿಕ ವರದಿಯನ್ನು ಸಿದ್ಧಪಡಿಸುತ್ತದೆ.

ದಾರಿತಪ್ಪಿಸುವ ಸುದ್ದಿ ಇದ್ದರೆ, ಅದನ್ನು ಶೀಘ್ರದಲ್ಲೇ ಸ್ಪಷ್ಟಪಡಿಸಲಾಗುತ್ತದೆ. ನಕಾರಾತ್ಮಕ ಸುದ್ದಿ ಇದ್ದರೆ, ಸ್ಪಷ್ಟೀಕರಣವನ್ನು ತ್ವರಿತವಾಗಿ ನೀಡಲಾಗುವುದು ಎಂದು ಅದು ಹೇಳಿದೆ.

ಪ್ರಕಟಣೆಗಳು, ಚಾನೆಲ್‌ಗಳು ಮತ್ತು ಡಿಜಿಟಲ್ ಪ್ಲಾಟ್‌ಫಾರ್ಮ್‌ಗಳ ಬೆಳವಣಿಗೆಯಿಂದಾಗಿ ಕೇಂದ್ರದ ಅವಶ್ಯಕತೆ ಸ್ಥಾಪನೆ ಅನಿವಾರ್ಯ. ಸರ್ಕಾರಿ ಯೋಜನೆಗಳು, ನೀತಿಗಳಿಗೆ ಸಂಬಂಧಿಸಿದ ಸುದ್ದಿಗಳನ್ನು ಹೇಗೆ ನೀಡಲಾಗುತ್ತದೆ ಎಂಬುದನ್ನು ಒಂದೇ ಛತ್ರಿಯಡಿಯಲ್ಲಿ ಮೇಲ್ವಿಚಾರಣೆ ಮಾಡುವ ಅಗತ್ಯವಿತ್ತು ಎಂದು ಸರ್ಕಾರಿ ಆದೇಶದಲ್ಲಿ ತಿಳಿಸಲಾಗಿದೆ.

ಪ್ರತಿದಿನ ಬೆಳಿಗ್ಗೆ 8 ರಿಂದ ರಾತ್ರಿ 10 ರವರೆಗೆ ಕಾರ್ಯನಿರ್ವಹಿಸುವ ಈ ಕೇಂದ್ರವನ್ನು ಮಾಹಿತಿ ಮತ್ತು ಪ್ರಚಾರ ನಿರ್ದೇಶನಾಲಯ ನಿರ್ವಹಿಸುತ್ತದೆ.

ಕೇಂದ್ರವನ್ನು ಸ್ಥಾಪಿಸಲು ಸರ್ಕಾರ ಆಡಳಿತಾತ್ಮಕ ಮತ್ತು ಆರ್ಥಿಕ ಅನುಮೋದನೆ ನೀಡಿದೆ ಎಂದು ಜಿಆರ್ ತಿಳಿಸಿದೆ.

## ಕೆಜಿಎಂಎಸ್ ಶಾಲೆಯ 7ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ

# ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿದ್ಯಾರ್ಥಿಗಳಳು ಕೇವಲ ಅಂಕಗಳ ದಾಸರಾಗಬೇಡಿ. ಅಂಕ ಗಳಿಕೆ ನಿಮ್ಮ ಭವಿಷ್ಯಕ್ಕೆ ಅವಶ್ಯಕ. ಅದಕ್ಕಿಂತಲೂ ಮುಖ್ಯವಾದುದು ಮಾನವೀಯತೆ ಮತ್ತು ಮೌಲ್ಯಗಳು. ಆದ್ದರಿಂದ ನಿಮ್ಮ ಜೀವನದಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡು ಮುನ್ನಡೆಯಿರಿ ಎಂದು ರೋಣ ಕ್ಷೇತ್ರ ಶಿಕ್ಷಣಾಧಿಕಾರಿ ರುದ್ರಪ್ಪ ಹುರಳಿ ಹೇಳಿದರು.

ಪಟ್ಟಣದ ಕೆಜಿಎಂಎಸ್ ಶಾಲೆಯ 7ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಮಕ್ಕಳಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸುವಲ್ಲಿ ಪಾಲಕರ ಪಾತ್ರ ಮಹತ್ವದ್ದಾಗಿದೆ. ತಮ್ಮ ಜವಾಬ್ದಾರಿಯನ್ನರಿತು ಪಾಲಕರು ಮಕ್ಕಳನ್ನು ಬೆಳೆಸಿ, ಅವರನ್ನು ವಿದ್ಯಾವಂತರನ್ನಾಗಿ ಮಾಡಬೇಕೆಂದರು.

ಡಯಟ್‌ನ ಉಪನ್ಯಾಸಕ ಕೆ.ಪಿ. ಸಾಲಿಮಠ ಮಾತನಾಡಿ, ಈಗ ಸರಕಾರಿ ಶಾಲೆಗಳು ಯಾವುದೇ



ಖಾಸಗಿ ಶಾಲೆಗಳಿಗೂ ಕಡಿಮೆಯಿಲ್ಲ. ಇಲ್ಲಿಯೂ ಉತ್ತಮ ಗುಣಮಟ್ಟದ ಶಿಕ್ಷಣ ಸಿಗುತ್ತದೆ. ಒಂದು ಸರಕಾರಿ ಪ್ರಾಥಮಿಕ ಶಾಲೆ ಹೇಗೆ ಕಾರ್ಯ ನಿರ್ವಹಿಸಬಹುದು ಎಂಬುದಕ್ಕೆ ನರೇಗಲ್ಲದ ಕೆಜಿಎಂಎಸ್ ಶಾಲೆ ಉತ್ತಮ ಉದಾಹರಣೆಯಾಗಿದೆ ಎಂದರು.

ಬಿಆರ್‌ಪಿ ಈರಪ್ಪ ಮಾದರ ಮಾತನಾಡಿ, ಸರಕಾರ ನಿಮಗಾಗಿ, ನಿಮ್ಮ ಶಿಕ್ಷಣಕ್ಕಾಗಿ ಸಾಕಷ್ಟು ಯೋಜನೆಗಳನ್ನು ಜಾರಿಗೊಳಿಸಿದೆ. ಈ ಎಲ್ಲ ಯೋಜನೆಗಳ ಸದುಪಯೋಗ ಪಡೆದುಕೊಂಡು ನಿಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಿ ಎಂದರು.

ವೇದಿಕೆಯ ಮೇಲೆ ಎಸ್‌ಡಿಎಂಸಿ ಉಪಾಧ್ಯಕ್ಷೆ ರೇಣುಕಾ ಜೋಗಿ, ಪ.ಪಂ ಸದಸ್ಯ ಶೇಖಪ್ಪ ಕೆಂಗಾರ, ಗಣೇಶ ನವಲಗುಂದ, ಬಸವರಾಜ ಮಣ್ಣೊಡ್ಡರ, ಎಂಸಿಎಸ್ ಎಸ್‌ಡಿಎಂಸಿ ಅಧ್ಯಕ್ಷ ತಿಮ್ಮರೆಡ್ಡಿ ಬಂಡಿವಡ್ಡರ, ಅಂದಾನಗೌಡ ಲಕ್ಕನಗೌಡ್ರ, ತಾಲೂಕಾ ದೈಹಿಕ ಪರೀವೀಕ್ಷಕ ಆರ್.ಎಸ್. ನರೇಗಲ್ಲ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ, ನಿವೃತ್ತ ಸೈನಿಕ ದಿನೇಶ ಕೋಗಿಲೆ ಇನ್ನಿತರರಿದ್ದರು.

ಅಧ್ಯಕ್ಷತೆ ವಹಿಸಿದ್ದ ಎಸ್‌ಡಿಎಂಸಿ ಅಧ್ಯಕ್ಷ ಆನಂದ ಕೊಟಗಿ ಮಾತನಾಡಿ, ನಮ್ಮ ಶಾಲೆಯ ಶಿಕ್ಷಕ ಬಳಗದವರ ಪ್ರಾಮಾಣಿಕ ಸೇವೆಯಿಂದ ಪಟ್ಟಣದಲ್ಲಿ ನಮ್ಮ ಶಾಲೆಗೊಂದು ಉತ್ತಮ ಹೆಸರು ಬಂದಿದೆ. ದಾನಿಗಳೂ ಸಹ ಸಾಕಷ್ಟು ಅನುಕೂಲತೆಗಳನ್ನು ಮಾಡಿಕೊಟ್ಟಿದ್ದಾರೆ. ಇಲಾಖಾ ಅಧಿಕಾರಿಗಳೂ ಸಹ ನಮ್ಮ ಶಾಲೆಯ ಬಗ್ಗೆ ಅಭಿಮಾನವನ್ನು ಹೊಂದಿದ್ದು, ನಮಗೆ ವರದಾನವಾಗಿದೆ ಎಂದರು.

ಮುಖ್ಯಾಧ್ಯಾಪಕ ಬಿ.ಬಿ. ಕುರಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಶಿಕ್ಷಕಿ ಎನ್. ಲ್. ಚವ್ಹಾಣ ನಿರೂಪಿಸಿದರು. ಶಿಕ್ಷಕ ಜೆ.ಎ. ಪಾಟೀಲ ಸ್ವಾಗತಿಸಿದರೆ, ಎಂ.ಎಸ್. ಮಾಳಶೆಟ್ಟಿ ವಂದಿಸಿದರು.

## ಪಂಚಾಕ್ಷರಿ ಗದಗ ಘರಾನಾ ಸಂಗೀತ ಸಮ್ಮೇಳನದಲ್ಲಿ ಅನ್ನದಾನೀಶ್ವರ ಶ್ರೀಗಳ ನುಡಿ

# ಪಂಚಾಕ್ಷರಿ, ಪುಟ್ಟರಾಜ ಗವಾಯಿಗಳು ಅಜರಾಮರ

■ವಿಜಯಸಾಕ್ಷಿ ಸುದ್ದಿ, ಗದಗ

ಪಂ. ಪಂಚಾಕ್ಷರ ಗವಾಯಿಗಳವರು ಸಂಗೀತ ಲೋಕವನ್ನು ಉದ್ಧಾರ ಮಾಡಿದ ಮಹಾನ್ ಪುಣ್ಯಾತ್ಮರು. ಇವರ ಶಿಷ್ಯರಾದ ಪಂ.ಡಾ. ಪುಟ್ಟರಾಜ ಕವಿ ಗವಾಯಿಗಳವರೂ ಸಹ ಅಭೂತಪೂರ್ವ ಸಂಗೀತ ತಜ್ಞರಾಗಿದ್ದರು ಎಂದು ಮುಂಡರಗಿ ಅನ್ನದಾನೀಶ್ವರ ಸಂಸ್ಥಾನಮಠದ ಜ.ನಾಡೋಜ ಡಾ.ಅನ್ನದಾನೀಶ್ವರ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

ಬುಧವಾರ ನಗರದ ಅಡವೀಂದ್ರಸ್ವಾಮಿ ಮಠದಲ್ಲಿ ಶ್ರೀಮಠದ ಕೃಪಾಶ್ರಯದಲ್ಲಿ ಶ್ರೀಗುರು ಪಂಚಾಕ್ಷರಿ ಸೇವಾ ಸಮಿತಿ, ಬೆಂಗಳೂರಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಜರುಗಿದ 333ನೇ ಶಿವಾನುಭವ, ಗಾನಯೋಗಿ ಪಂಚಾಕ್ಷರಿ ಸಂಗೀತ ಪರಂಪರಾ ಸಮ್ಮೇಳನ, ಗುರುಕುಮಾರ ಪಂಚಾಕ್ಷರಿ ಸಮ್ಮಾನ–2025 ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಇದೊಂದು ಅಪರೂಪದ ಅಭೂತಪೂರ್ವ ಕಾರ್ಯಕ್ರಮವಾಗಿದ್ದು, ಅಂತಾರಾಷ್ಟ್ರೀಯ ಖ್ಯಾತಿಯ ಗಾಯಕ ಪದ್ಮಶ್ರೀ ಪಂ.ಎಂ. ವೆಂಕಟೇಶಕುಮಾರ ಅವರಿಗೆ 'ಗುರುಕುಮಾರ ಪಂಚಾಕ್ಷರಿ ಸಮ್ಮಾನ–2025' ಪುರಸ್ಕಾರ ನೀಡಿದ್ದು ಶ್ಲಾಘನೀಯ. ಈ ಗೌರವದಿಂದ ಪಂಚಾಕ್ಷರ ಗವಾಯಿಗಳವರನ್ನೇ ಗೌರವಿಸಿದಂತಾಗಿದೆ ಎಂದು ಬಣ್ಣಿಸಿದರು.

ಶ್ರೀಗುರು ಪಂಚಾಕ್ಷರಿ ಸೇವಾ ಸಮಿತಿ ಹಾಗೂ ಅಡವೀಂದ್ರಸ್ವಾಮಿ ಮಠದಿಂದ ಈ ಕಾರ್ಯಕ್ರಮ ಏರ್ಪಡಿಸಿದ್ದು ಅಭಿನಂದನೀಯ.

ಬಾಗಲಕೋಟೆಯ ಸಂಗೀತ ಪ್ರಾಧ್ಯಾಪಕ ಡಾ.ಸಿದ್ಧರಾಮಯ್ಯ ಮಠಪತಿ ಘರಾನಾ ನುಡಿಗಳನ್ನಾಡಿ, ಸಂಗೀತದಲ್ಲಿ ಹಲವರು ರೀತಿಯ ಘರಾನಾಗಳಿದ್ದು, ಈ ಮಾಲಿಕೆಗೆ ಧಾರವಾಡ ಹಾಗೂ ಗದಗ ಘರಾನಾಗಳು ಇತ್ತಿಚೆಗೆ ಸೇರ್ಪಡೆಯಾಗಿವೆ. ಇಂತಹ ಘರಾನಾಗಳಿಗೆ ಪಂಚಾಕ್ಷರಿ ಹಾಗೂ ಪುಟ್ಟರಾಜರು ಹೊಸ ಸ್ವರೂಪ ನೀಡಿದವರು. ಈ ಎಲ್ಲ ಘರಾನಾಗಳನ್ನೇ ಕ್ರೋಢೀಕರಿಸಿಕೊಂಡು ಪಿಎಚ್‌ಡಿ ಅಧ್ಯಯನ ಮಾಡುವಷ್ಟರ ಮಟ್ಟಿಗೆ ವಿಫುಲವಾದ ಮಾಹಿತಿ ಲಭ್ಯವಿದ್ದು, ಅಂತಹ ಕಾರ್ಯಕ್ಕೆ ಅಧ್ಯಯನಶೀಲರು ಮುಂದಾಗಬೇಕೆಂದು ಹೇಳಿದರು.




ನಾಡಿನ ಹೆಸರಾಂತ ಸಂಗೀತ ಕಲಾವಿದರು ನೀಡಿದ ಸಂಗೀತ ಕಾರ್ಯಕ್ರಮ ವಿಶಿಷ್ಟವಾಗಿತ್ತು. ಈ ಸಂಗೀತ ಸಾಧಕರಿಗೆ ಭವಿಷ್ಯದಲ್ಲಿ ಹೆಚ್ಚಿನ ಸ್ಥಾನಮಾನಗಳು ಪ್ರಾಪ್ತಿಯಾಗಲಿ ಎಂದರು.

ನೇತೃತ್ವ ವಹಿಸಿದ್ದ ಹಾವೇರಿ ಹುಕ್ಕೇರಿಮಠದ ಪೂಜ್ಯ ಸದಾಶಿವ ಮಹಾಸ್ವಾಮಿಗಳು ಮಾತನಾಡಿ, ಗದಗ ಪರಿಸರದಲ್ಲಿ ಗಾನಯೋಗಿ ಪಂಚಾಕ್ಷರಿ ಸಂಗೀತ ಪರಂಪರಾ ಸಮ್ಮೇಳನ ನಡೆಸಿದ್ದು, ಪಂಚಾಕ್ಷರಿ ಹಾಗೂ ಪುಟ್ಟರಾಜ ಗವಾಯಿಗಳನ್ನು ಸ್ಮರಿಸುವ, ಅವರನ್ನು ಅಜರಾಮರಗೊಳಿಸುವ ಮಹತ್ವದ ಕಾರ್ಯಕ್ರಮ ಇದಾಗಿದೆ ಎಂದರು.

ಸಮ್ಮುಖವನ್ನು ಅಡವೀಂದ್ರ ಮಠದ ಧರ್ಮದರ್ಶಿ ವೇ. ಮಹೇಶ್ವರಸ್ವಾಮಿಗಳು ವಹಿಸಿದ್ದರು. ಅಧ್ಯಕ್ಷತೆಯನ್ನು ಪಂ. ಡಾ. ರಾಜಗುರು ಗುರುಸ್ವಾಮಿ ಕಲಕೇರಿ ವಹಿಸಿ ಸಂದರ್ಭೋಚಿತವಾಗಿ ಮಾತನಾಡಿದರು.

ಅಂತರಾಷ್ಟ್ರೀಯ ಖ್ಯಾತ ಗಾಯಕ ಧಾರವಾಡದ ಪದ್ಮಶ್ರೀ ಪಂ.ಎಂ. ವೆಂಕಟೇಶಕುಮಾರ ಅವರಿಗೆ ಗುರುಕುಮಾರ ಪಂಚಾಕ್ಷರಿ ಸಮ್ಮಾನ–2025 ಪುರಸ್ಕಾರ ನೀಡಿ ಗೌರವಿಸಲಾಯಿತು. ನಂತರ ಅವರಿಂದ ಜರುಗಿದ ಸಂಗೀತ ಕಾರ್ಯಕ್ರಮ ಜನಮನ ಸೆಳೆಯಿತು.

ಮುಖ್ಯ ಅತಿಥಿಗಳಾಗಿ ಬಸವರಾಜ ಪಲ್ಲೇದ, ಲೀಲಾವತಿ ಬಿಳೇಯಲಿ, ನಾಗರಾಜ ಹೊಸೂರ ಆಗಮಿಸಿದ್ದರು. ಸಮಾರಂಭದಲ್ಲಿ ವೀರಶೈವ ಮಹಾಸಭಾದ ಜಿಲ್ಲಾ ಅಧ್ಯಕ್ಷ ಶರಣಬಸಪ್ಪ ಗುಡಿಮನಿ, ರಾಜ್ಯ ಪ್ರಶಸ್ತಿ ವಿಜೇತೆ ಡಾ. ವ್ಹಿ.ಬಿ. ಹಿರೇಮಠ ಹಾಗೂ ಪ್ರಾಚಾರ್ಯ ವ್ಹಿ.ಎಂ. ಗುರುಮಠ ಅವರನ್ನು ಸನ್ಮಾನಿಸಲಾಯಿತು.

ಸಿದ್ಧಲಿಂಗಯ್ಯಶಾಸ್ತ್ರೀ ಗಡ್ಡದಮಠ ಸ್ವಾಗತಿಸಿದರು, ಯು.ಆರ್. ಭೂಸನೂರಮಠ ಪರಿಚಯಿಸಿದರು. ಪ್ರೊ. ಬಾಹುಬಲಿ ಜೈನರ್ ನಿರೂಪಿಸಿದರು. ಸೇವಾ ಸಮಿತಿಯ ಕಾರ್ಯದರ್ಶಿ ಮಲ್ಲಯ್ಯ ಶಿರೋಳಮಠ ವಂದಿಸಿದರು.

ಡಾ.ಸಿದ್ಧರಾಮಯ್ಯ ಮಠಪತಿ, ಡಾ. ನಾರಾಯಣ ಹಿರೇಕೊಳಚಿ, ಡಾ. ಗುರುಬಸವ ಮಹಾಮನಿ, ಡಾ. ಹನುಮಂತ ಕೊಡಗಾನೂರ, ಡಾ. ಶಿವಬಸಯ್ಯ ಗಡ್ಡದಮಠ, ಪ್ರೊ. ಎಂ.ಎಸ್. ಮಠದ, ಸುಕ್ರುಸಾಬ ಮುಲ್ಲಾ, ರೇಷ್ಮಾ ಭಟ್, ಶರಣಕುಮಾರ ಗುತ್ತರಗಿ, ಬಸವರಾಜ ಹಿರೇಮಠ, ಕೃತಿಕಾ ಜಂಗಿನಮಠ, ಭೀಮಾಶಂಕರ ಬಿದನೂರ ಅವರಿಂದ ಜರುಗಿದ ಸಂಗೀತ ಕಾರ್ಯಕ್ರಮ ಜನಮನ ಸೆಳೆಯಿತು.

## ಕಸಾಪದಿಂದ ನಾರಾಯಣಭಟ್, ಕು.ಶಿ. ಹರಿದಾಸಭಟ್ ದತ್ತಿ ಉಪನ್ಯಾಸ

# ಬೇಂದ್ರೆ ಕಾವ್ಯದಲ್ಲಿ ಆಧ್ಯಾತ್ಮಿಕತೆಯ ಹೊಳಪು

■ವಿಜಯಸಾಕ್ಷಿ ಸುದ್ದಿ, ಗದಗ

ಬೇಂದ್ರೆಯವರ ಕಾವ್ಯ ಭಾಷೆ ವಿಶಿಷ್ಠವಾದುದು. ಜನಭಾಷೆ ಹಾಗೂ ಪ್ರಕೃತಿ ಭಾಷೆಯನ್ನು ಸೇರಿಸಿ ಧ್ವನಿಪೂರ್ಣ ಕವಿತೆಗಳನ್ನು ರಚಿಸಿದ್ದಾರೆ. ಓದುಗ ಹಾಗೂ ವಿಮರ್ಶಕನ ಸಾಮರ್ಥ್ಯಕ್ಕನುಗುಣವಾಗಿ ಅರ್ಥ ಸಾಧ್ಯತೆಗಳನ್ನು ವಿಸ್ತರಿಸಿಕೊಳ್ಳುತ್ತಾ ಹೋಗುತ್ತದೆ. ಕವಿತಾ ಸಂಕಲನದ ಅನೇಕ ಕವಿತೆಗಳಲ್ಲಿ ಆಧ್ಯಾತ್ಮಿಕ ಚಿಂತನೆಗಳನ್ನು ಹೂರಣವನ್ನು ಕಾಣಬಹುದಾಗಿದೆ ಎಂದು ಡಾ. ಸಂಗಮೇಶ ತಮ್ಮನಗೌಡ್ರ ಅಭಿಪ್ರಾಯಪಟ್ಟರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ ಗದುಗಿನ ತೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನದಲ್ಲಿ ನಾರಾಯಣಭಟ್ ಶಿವಪೂರ ಹಾಗೂ ಕು.ಶಿ. ಹರಿದಾಸಭಟ್ ಸ್ಮರಣಾರ್ಥ ಜರುಗಿದ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಬೇಂದ್ರೆಯವರ ಕಾವ್ಯವನ್ನು ಪ್ರಕೃತಿ, ಪ್ರೀತಿ, ತಾಯಿ, ಮಾನವೀಯತೆ, ವಿರಾಟದರ್ಶನ, ಅಧ್ಯಾತ್ಮ, ಅನುಭಾವ ಹಿನ್ನೆಲೆಯಲ್ಲಿ ಗಮನಿಸಬಹುದಾಗಿದೆ. ಹೃದಯ ಸಮುದ್ರ, ಮುಕ್ತಕಂಠ, ಚೈತ್ಯಾಲಯ, ಜೀವಲಹರಿ ಈ ಸಂಕಲನಗಳು 'ಅರಳು–ಮರಳು' ಎಂಬ ಹೆಸರಿನಲ್ಲಿ ಒಟ್ಟಾಗಿ ಸೇರಿ ಪ್ರಕಟವಾಗಿವೆ. ಈ ಕವಿತೆಗಳಲ್ಲಿ ಬೇಂದ್ರೆಯವರ ಆಧ್ಯಾತ್ಮಿಕತೆ, ಅನುಭಾವ, ಗುರುಭಕ್ತಿಯ ಸ್ವರೂಪದ ನೆಲೆಗಳು ವ್ಯಕ್ತವಾಗಿವೆ. ಮಾನವನ ಉನ್ನತಿಗೆ ಅವಶ್ಯವಾದ ಆಧ್ಯಾತ್ಮಿಕ ವಿಚಾರಗಳಿವೆ ಎಂದು ತಿಳಿಸಿದರು.




ನಾರಾಯಣಭಟ್ ಶಿವಪೂರ ಅವರ ಶ್ರಮ ಸಂಸ್ಕೃತಿ ಹಾಗೂ ಕು.ಶಿ. ಹರಿದಾಸಭಟ್ ಅವರ ಸಾಹಿತ್ಯದೊಲುಮೆಯನ್ನು ಡಾ. ದತ್ತಪ್ರಸನ್ನ ಪಾಟೀಲ ವಿವರಿಸಿದರು.

ಕಾರ್ಯಕ್ರಮದಲ್ಲಿ ಅನಂತ ಮೋಹನ ಭಟ್, ಡಾ. ಅನಂತ ಶಿವಪೂರ, ಡಾ. ವಾಣಿ ಶಿವಪೂರ ಮಾತನಾಡಿದರು. ಕರ್ನಾಟಕ ಬಯಲಾಟ ಅಕಾಡೆಮಿಯಿಂದ ಪ್ರಶಸ್ತಿಗೆ ಭಾಜನರಾದ ಕಲಾವಿದ ಅಶೋಕ ಸುತಾರ ಅವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ವೇದಿಕೆ ಮೇಲೆ ಜಯದೇವಭಟ್, ಕೃಷ್ಣಮೂರ್ತಿ ಶಿವಪೂರ ಉಪಸ್ಥಿತರಿದ್ದರು.


ಕಾರ್ಯದರ್ಶಿ ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಡಾ. ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ಡಿ.ಎಸ್. ಬಾಪುರಿ ವಂದಿಸಿದರು

ಕಾರ್ಯಕ್ರಮದಲ್ಲಿ ಕೆ.ಎಚ್. ಬೇಲೂರ, ಚಂದ್ರಶೇಖರ ವಸ್ತ್ರದ, ಎಂ.ಸಿ. ವಗ್ಗಿ, ಆರ್.ಡಿ. ಕಪ್ಪಲಿ, ಬಿ.ಬಿ. ಹೊಳಗುಂದಿ, ಬಸವರಾಜ ಗಣಪ್ಪನವರ, ಡಾ. ಶಿವಪ್ಪ ಕುರಿ, ಎಂ.ವಿ. ಕೆಂಭಾವಿಮಠ, ಶೋಭಾ ಶಿವಪೂರ, ಬಿ.ಎಸ್. ಹಿಂಡಿ, ಯಲ್ಲಪ್ಪ ಹಂದ್ರಾಳ, ಎಸ್.ಎಸ್. ಕಳಸಾಪೂರ, ಪ್ರ.ತೋ. ನಾರಾಯಣಪೂರ, ಮಂಜುಳಾ ವೆಂಕಟೇಶಯ್ಯ, ಭಾರತಿ ಮೋಹನ ಕೋಟಿ, ಜಯಶ್ರೀ ಅಂಗಡಿ, ನಿಖಿತಾ ಸುತಾರ, ಜಯನಗೌಡ ಪಾಟೀಲ, ಸತೀಶ ಚನ್ನಪ್ಪಗೌಡರ, ಬಸವರಾಜ ವಾರಿ, ಸಿ.ಟಿ. ದುಂದೂರ, ರಾಜೇಂದ್ರ ಬರದ್ವಾಡ, ರಾಚಪ್ಪ ಕುಪ್ಪಸದ, ಕಾರ್ತಿಕ ಶಿವಪೂರ, ಪರಮೇಶ್ವರಪ್ಪ ಐರಣಿ, ಬೃಂದಾ ಶಿವಪೂರ, ಗುರುದೇವಿ ಪಾರ್ವತಿಮಠ, ಉಮಾ ಪಾರ್ವತಿಮಠ, ಅಶೋಕ ಕೊಡಗಲಿ, ಎಚ್.ಟಿ. ಸಂಜೀವಸ್ವಾಮಿ, ಸಿ.ಎಂ. ಮಾರನಬಸರಿ, ಹೇಮಲತಾ ಪಾಟೀಲ, ಸುಮನ ಪಾಟೀಲ, ಡಿ.ಜಿ. ಕುಲಕರ್ಣಿ, ಶಾಂತಾ ಗಣಪ್ಪನವರ, ಶೈಲಶ್ರೀ ಕಪ್ಪರದ, ಅಂಬಿಕಾ ಶಿವಪೂರ ಮೊದಲಾದವರು ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಭಾರತೀಯ ಆಧ್ಯಾತ್ಮಿಕ ಚಿಂತನೆಗಳು ಮಾನವನ ಔನ್ನತ್ಯಕ್ಕೆ ದಾರಿದೀವಿಗೆಯಾಗಿವೆ. ಬೇಂದ್ರೆಯವರು ಅರವಿಂದರ, ಬ್ರಹ್ಮಚೈತನ್ಯರ ಚಿಂತನೆಗಳಿಂದ ಪ್ರಭಾವಿತರಾಗಿದ್ದರು. ಅವರ ಬಹುಪಾಲು ಕವಿತೆಗಳು ಆಧ್ಯಾತ್ಮಿಕತೆಯ ಲೇಪವನ್ನು ಹೊಂದಿವೆ ಎಂದು ತಿಳಿಸಿದರು.

# ಇನ್‌ಸ್ಪೈರ್ ಅವಾರ್ಡ್‌ಗೆ ಆಯ್ಕೆ






■ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು ಜಾರಿಗೊಳಿಸಿದ ಯೋಜನೆಯಾದ ಇನ್‌ಸ್ಪೈರ್ ಇನ್ ಸೈನ್ಸ್ ಪರಶುಟ್ ಫಾರ್ ಇನ್‌ಸ್ಪೈರ್ಡ್ ರಿಸರ್ಚ್ ಕಾರ್ಯಕ್ರಮದ ಅಡಿಯಲ್ಲಿ ನಡೆಸಿದ ಪರೀಕ್ಷೆಯಲ್ಲಿ ಸಿದ್ದಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಾದ ಬೇಬಿ ಉಮಾಮಹೇಶ್ವರಿ ಬಿ.ಬುಕ್ಕಸಾಗರ ಮಠ, ಅನುಪಮಾ ರಾಘವೇಂದ್ರ ಮುಗಳಿ, ಕಾತುನಬಿ ಆರ್.ಸುಂಕದ, ಜೀವನಗೌಡ ಚಂದ್ರಶೇಖರ ಗೌಡ ಪಾಟೀಲ್ ಆಯ್ಕೆಯಾಗಿದ್ದಾರೆ.

ಪ್ರತಿಭಾವಂತ ಯುವ ವಿದ್ಯಾರ್ಥಿಗಳು ವಿಜ್ಞಾನವನ್ನು ಅಧ್ಯಯನ ಮಾಡಲು ಮತ್ತು ಸಂಶೋಧನೆಯಲ್ಲಿ ವೃತ್ತಿ ಜೀವನವನ್ನು ಮುಂದುವರಿಸುವಂತೆ ಮಾಡಲು 2009ರಿಂದ ಭಾರತ ಸರ್ಕಾರ ಈ ಕಾರ್ಯಕ್ರಮವನ್ನು ಆಯೋಜಿಸುತ್ತಾ ಬಂದಿದೆ. 2024–25ನೇ ಸಾಲಿಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಡಿ.ಡಿಪಿಐ ಆರ್.ಎಸ್. ಬುರಡಿ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ರವೀಂದ್ರ ಶೆಟ್ಟಪ್ಪನವರ್, ಎಸ್‌ಡಿಎಂಸಿ ಅಧ್ಯಕ್ಷರಾದ ರೇಣುಕಾ ರೋಣದ, ಪ್ರಭಾರಿ ಮುಖ್ಯೋಪಾಧ್ಯಾಯರಾದ ಜಯಲಕ್ಷ್ಮೀ ಅಣ್ಣಿಗೇರಿ, ಶಾಮ ಲಾಂಡೆ, ಆಯ್.ಬಿ. ಮಡಿವಾಳರ, ಶಂಕ್ರಮ್ಮ ಆರ್.ಹಣಮಗೌಡ್ರು, ಎಂ.ಐ. ಶಿವನಗೌಡ್ರು, ಮಂಜುಳಾ ಪಿ.ಸಾಮ್ರಾಣಿ, ಸುಮಂಗಲ ಎಂ.ಪತ್ತಾರ್, ಶಾರದಾ ಬಾಣದ, ಶೋಭಾ ಎಸ್.ಗಾಳಿ, ರಮೇಶ್ ಬಸರಿ, ಸಾವಿತ್ರಿ ಎ.ಗದ್ದನಕೇರಿ, ಎನ್. ಆರ್. ಶಿರೋಳ್, ಸಬಿಯಾ ಯು.ಕುಷ್ಟಗಿ, ಗಂಗಾ ಎಂ.ಅಳವಂಡಿ, ಮಂಜುಳಾ ಟಿ, ಪದ್ಮಾ ವಿ.ದಾಸರ್, ಲಕ್ಷ್ಮಮ್ಮ ಮಾಳೋತ್ತರ್, ಶಶಿಕಲಾ ಬಿ.ಗುಳೇದವರ, ಸಂಜೀವಿನಿ ಕೂಲಗುಡಿ ಸೇರಿದಂತೆ ಎಸ್‌ಡಿಎಂಸಿ ಸರ್ವ ಪದಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಶುಭ ಹಾರೈಸಿದ್ದಾರೆ.

## 6,595 ಜನ ಕಟ್ಟಡ ಕಾರ್ಮಿಕರ ಮಕ್ಕಳಿಗೆ ವಿವಾಹ ಪ್ರೋತ್ಸಾಹಧನ ಬಿಡುಗಡೆಗೆ ಕ್ರಮ

# ಅರ್ಹ ಫಲಾನುಭವಿಗಳಿಗೆ ಸಹಾಯಧನ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕಟ್ಟಡ ಕಾರ್ಮಿಕರ ಮಕ್ಕಳ ವಿವಾಹಕ್ಕೆ ದೊರೆಯುವ ಪ್ರೋತ್ಸಾಹಧನ 2024–25ನೇ ಸಾಲಿನಲ್ಲಿ ಮಂಜೂರಾಗಿರುವ 23,121 ಫಲಾನುಭವಿಗಳ ಪೈಕಿ 6,595 ಫಲಾನುಭವಿಗಳಿಗೆ ಸಹಾಯ ಧನದ ಮೊತ್ತವನ್ನು ಅವರ ಖಾತೆಗೆ ಡಿಬಿಟಿ ಮೂಲಕ ನೇರ ಜಮಾ ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಕಾರ್ಮಿಕ ಸಚಿವರಾದ ಸಂತೋಷ ಲಾಡ್ ತಿಳಿಸಿದರು.

ಅವರು ಬುಧವಾರ ಬೆಳಿಗ್ಗೆ ವಿಧಾನ ಸಭೆಯ ಕಲಾಪದಲ್ಲಿ ಭಾಗವಹಿಸಿ, ಹುಬ್ಬಳ್ಳಿ–ಧಾರವಾಡ ಕೇಂದ್ರೀಯ ಕ್ಷೇತ್ರದ ಶಾಸಕರಾದ ಮಹೇಶ ಟೆಂಗಿನಕಾಯಿ ಅವರು ಕೇಳಿದ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು.




2022ರಿಂದ ಇಲ್ಲಿಯವರೆಗೆ ಮದುವೆ ಧನಸಹಾಯಕ್ಕಾಗಿ 2022–23ನೇ ಸಾಲಿನಲ್ಲಿ 66,514 ಅರ್ಜಿಗಳು ಸಲ್ಲಿಕೆಯಾಗಿದ್ದು, ಅವುಗಳಲ್ಲಿ 48,366 ಅರ್ಜಿಗಳು ಮಂಜೂರಾಗಿವೆ. 2023–24ನೇ ಸಾಲಿನಲ್ಲಿ 50,398 ಅರ್ಜಿಗಳು ಸಲ್ಲಿಕೆಯಾಗಿದ್ದು, 34,604 ಅರ್ಜಿಗಳು ಮಂಜೂರಾಗಿವೆ. ಮತ್ತು 2024–25ನೇ ಸಾಲಿನಲ್ಲಿ 40,262 ಅರ್ಜಿಗಳು ಸಲ್ಲಿಕೆಯಾಗಿದ್ದು, 23,121 ಅರ್ಜಿಗಳು ಮಂಜೂರಾಗಿವೆ. ಒಟ್ಟಾರೆಯಾಗಿ ಕಳೆದ ಮೂರು ವರ್ಷಗಳಲ್ಲಿ ಒಟ್ಟು ರಾಜ್ಯಾಂದತ್ಯ 1,57,174 ಅರ್ಜಿಗಳು ಮದುವೆ ಧನಸಹಾಯ ಬಯಸಿ ಸಲ್ಲಿಕೆಯಾಗಿದ್ದು, ಇವುಗಳ ಪೈಕಿ 1,06,091 ಅರ್ಜಿಗಳು ಮಂಜೂರಾಗಿವೆ. ಇದರಲ್ಲಿನ 6,317 ಅರ್ಜಿಗಳು ಪರಿಶೀಲನೆಗೆ ಹಾಗೂ ಮಂಜೂರಾತಿಗೆ ಬಾಕಿ ಇವೆ ಎಂದು ಸಚಿವರು ಸದನಕ್ಕೆ ತಿಳಿಸಿದರು.

6,595 ಫಲಾನುಭವಿಗಳಿಗೆ ಸಹಾಯಧನದ ಮೊತ್ತವನ್ನು ಪಾವತಿಸುವ ಪೂರ್ವದಲ್ಲಿ ಕಾರ್ಮಿಕ ಅಧಿಕಾರಿಗಳು ಡಿಬಿಟಿ ತಂತ್ರಾಂಶದ ಮೂಲಕ ಫಲಾನುಭವಿಗಳ ಆಧಾರ್ ವ್ಯಾಲಿಡೇಷನ್ (Validation) ಹಾಗೂ ಇನ್ನಿತರ ಮಾನದಂಡಗಳ ಪ್ರಕ್ರಿಯೆ ಪೂರ್ಣಗೊಳಿಸಿ, ಅರ್ಹ ಫಲಾನುಭವಿಗಳಿಗೆ ಮಂಡಳಿಯಿಂದ ಸಹಾಯಧನವನ್ನು ಪಾವತಿಸಲಾಗುತ್ತದೆ ಎಂದು ಸಚಿವರು ತಿಳಿಸಿದರು.

ಹುಬ್ಬಳ್ಳಿ–ಧಾರವಾಡ ಸೆಂಟ್ರಲ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 2023ರಿಂದ ಈ ಯೊಜನೆಯಡಿ ಒಟ್ಟು 1,081 ಫಲಾನುಭವಿಗಳು ಅರ್ಜಿ ಸಲ್ಲಿಸಿದ್ದು, ಅದರಲ್ಲಿ 652 ಫಲಾನುಭವಿಗಳಿಗೆ ಸಹಾಯ ಧನವನ್ನು ಮಂಜೂರು ಮಾಡಿ, ಡಿಬಿಟಿ ಮುಖಾಂತರ ಫಲಾನುಭವಿಗಳಿಗೆ ಸಹಾಯಧನನ್ನು ವರ್ಗಾಯಿಸಲಾಗಿದೆ ಹಾಗೂ 46 ಅರ್ಜಿಗಳು ಪರಿಶೀಲನಾ ಹಂತದಲ್ಲಿವೆ ಎಂದು ಸಚಿವ ಸಂತೋಷ ಲಾಡ್ ಸದನದಲ್ಲಿ ತಿಳಿಸಿದರು.

## ಸಾವರ್ಕರ್ ಕುರಿತು ಹೇಳಿಕೆ: ವಿಚಾರಣೆಗೆ ಗೈರು: ರಾಹುಲ್ ಗಾಂಧಿಗೆ 200ರೂ. ದಂಡ!

■ವಿಜಯಸಾಕ್ಷಿ ಸುದ್ದಿ, ಮಹಾರಾಷ್ಟ್ರ

ಮಹಾರಾಷ್ಟ್ರದ ಅಕೋಲಾದಲ್ಲಿ ನವೆಂಬರ್ 2022ರಲ್ಲಿ ನಡೆದ 'ಭಾರತ್ ಜೋಡೋ ಯಾತ್ರೆ'ಯ ಸಂದರ್ಭದಲ್ಲಿ ವಿ.ಡಿ ಸಾವರ್ಕರ್ ವಿರುದ್ಧ 'ಅವಹೇಳನಕಾರಿ' ಹೇಳಿಕೆ ನೀಡಿದ ಆರೋಪ ಪ್ರಕರಣ ಸಂಬಂಧ ವಿಚಾರಣೆಗೆ ಗೈರಾಗಿದ್ದಕ್ಕೆ ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿಗೆ ಉತ್ತರ ಪ್ರದೇಶದ ಲಕ್ನೋ ಜಿಲ್ಲಾ ನ್ಯಾಯಾಲಯ 200 ರೂಪಾಯಿ ದಂಡ ವಿಧಿಸಿದೆ ಎಂದು ವರದಿಯಾಗಿದೆ. ವಿಚಾರಣೆಗೆ ಹಾಜರಾಗುವುದರಿಂದ ವಿನಾಯಿತಿ ಕೋರಿ ರಾಹುಲ್ ಗಾಂಧಿ ಸಲ್ಲಿಸಿದ್ದ ಅರ್ಜಿಯನ್ನು ಮಾನ್ಯ ಮಾಡುವಾಗ ಹೆಚ್ಚುವರಿ ಮುಖ್ಯ ನ್ಯಾಯಾಂಗ ಮ್ಯಾಜಿಸ್ಟ್ರೇಟ್ ಅಲೋಕ್ ವರ್ಮಾ ಅವರು ದಂಡ ವಿಧಿಸಿದ್ದಾರೆ. ತಮ್ಮ ಭಾಷಣದ ಮೂಲಕ ಮತ್ತು ಭಾಷಣಕ್ಕೂ ಮುನ್ನ ಪತ್ರಿಕಾಗೋಷ್ಠಿಯಲ್ಲಿ ಕರಪತ್ರಗಳನ್ನು ಬಿಡುಗಡೆ ಮಾಡುವ ಮೂಲಕ ಸಮಾಜದಲ್ಲಿ ದ್ವೇಷ ಹರಡಿದ್ದಾರೆ ಎಂದು ಆರೋಪಿಸಿ ವಕೀಲ ನೃಪೇಂದ್ರ ಪಾಂಡೆ ಎಂಬವರು ರಾಹುಲ್ ಗಾಂಧಿ ವಿರುದ್ಧ ದಾಖಲಿಸಿದ್ದ ಪ್ರಕರಣ ಸಂಬಂಧ ನ್ಯಾಯಾಲಯ ಕಳೆದ ವರ್ಷ ಡಿಸೆಂಬರ್‌ನಲ್ಲಿ ಸಮನ್ಸ್ ಜಾರಿ ಮಾಡಿತ್ತು.

# ಭಾರತ ಸೇವಾದಳದ ನಾಯಕತ್ವ ಶಿಬಿರ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇಲ್ಲಿನ ಮೇಗೇರಿಯ ಸರ್ಕಾರಿ ಹಿರಿಯ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಭಾರತ ಸೇವಾದಳ ಮಕ್ಕಳ ನಾಯಕತ್ವ ಶಿಬಿರದ ಉದ್ಘಾಟನಾ ಸಮಾರಂಭ ಜರುಗಿತು. ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಎಚ್. ನಾಣಕಿನಾಯ್ಕ ಅವರು ಶಿಬಿರವನ್ನು ಉದ್ಘಾಟಿಸಿದರು.

ಶಾಲೆಯ ಎಸ್.ಡಿ.ಎಮ್.ಸಿ. ಅಧ್ಯಕ್ಷರಾದ ರೇಣುಕಾ ತುಳಿ ಅಧ್ಯಕ್ಷತೆ ವಹಿಸಿದ್ದರು. ಕ್ಷೇತ್ರ ಸಮನ್ವಯಾಧಿಕಾರಿ ಬಿ.ಎಚ್. ಭಜಂತ್ರಿ, ಹಿರಿಯ ಪತ್ರಕರ್ತರಾದ ಜೆ.ಬಿ. ಹೆಸರೂರ, ಬಿ.ಆರ್.ಸಿ. ಸಂಪನ್ಮೂಲ ವ್ಯಕ್ತಿ ದೀಪಾಲಿ, ಶಿಕ್ಷಕಿ ಪಿ.ಬಿ. ಅಂಗಡಿ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಶಾಲೆಯ ಪ್ರಧಾನ ಗುರುಗಳಾದ ಎಚ್.ವಾಯ್. ಹೊಸಮನಿ ಸ್ವಾಗತಿಸಿದರು. ಭಾರತ ಸೇವಾದಳ ಜಿಲ್ಲಾ ಸಂಘಟಕರಾದ ಕುಮಾರಸ್ವಾಮಿ ಹೆಚ್.ಬಳ್ಳಾರಿ ಶಿಬಿರದ ಬಗ್ಗೆ ಪ್ರಾಸ್ತಾವಿಕವಾಗಿ ಮಾತನಾಡಿದರು. ತಾಲೂಕಾ ಕಾರ್ಯದರ್ಶಿ ಎಮ್.ಜಿ. ಮಾಂಡ್ರೆ ನಿರೂಪಿಸಿದರು. ತಾಲೂಕಾ ಅಧಿನಾಯಕಿ ವಾಯ್.ಎ. ಶಿರಹಟ್ಟಿ ವಂದಿಸಿದರು. ಶಿಬಿರದಲ್ಲಿ ಭಾರತ ಸೇವಾದಳ ಸ್ವಯಂಸೇವಕ ಮಕ್ಕಳು ಭಾಗವಹಿಸಿದ್ದರು.




**ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**
ಪಿನ್ ಕೋಡ್ ನಂ. 582101. ದೂರವಾಣಿ: 08372–278003.
ಇ ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ/2024–25/1698 ದಿನಾಂಕ: 05.03.2025

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀಮತಿ ಸುವರ್ಣಾ ಕೋಂ ಸದಾಶಿವಯ್ಯ ಮದರಿಮಠ ಸಾ॥ ಗದಗ** ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾಕಾಯ್ದೆ **1961 ರ ಕಲಂ 14(ಎ)**ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ–582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1. | ಬೆಟಗೇರಿ | 39/*/1/A | 03ಎಕರೆ–23ಗುಂಟೆ | ಕೃಷಿ | ವಸತಿ |

ಸಹಿ/– ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ–ಬೆಟಗೇರಿ
ವಾ.ಸಾ.ಇ/ಗದಗ/672/ದೇಶಪಾಂಡೆಪಬ್ಲಿಸಿಟಿ/2024–25



**ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**
ಪಿನ್ ಕೋಡ್ ನಂ. 582101. ದೂರವಾಣಿ: 08372–278003.
ಇ ಮೇಲ್: uda-gadag@hotmail.com

ಸಂ: ನಅಪ್ರಾಗಬೆ/ಭೂಬ/2024–25/1687 ದಿನಾಂಕ: 05.03.2025

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀ ವಿನಾಯಕ ತಂದೆ ಯಮನಪ್ಪ ಪರಾಪೂರ ಸಾ॥ ಗದಗ** ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ **1961 ರ ಕಲಂ 14(ಎ)**ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ–582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1. | ಗದಗ | 617/*/1ಕ | 03ಎಕರೆ–00ಗುಂಟೆ ಪೈಕಿ 02ಎಕರೆ–09ಗುಂಟೆ | ವಾಣಿಜ್ಯ | ವಸತಿ |

ಸಹಿ/– ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ–ಬೆಟಗೇರಿ
ವಾ.ಸಾ.ಇ/ಗದಗ/666/ದೇಶಪಾಂಡೆಪಬ್ಲಿಸಿಟಿ/2024–25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka